ಸಂಪುಟ : 10 ಸಂಚಿಕೆ: 112 ಪುಟ : 4+2 ಬೆಲೆ: 3.00 ಬುಧವಾರ ಜೂನ್ 04 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 112 Pages : 4+2 Price : 3.00 Wednesday June 04 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಶಿಲಾನ್ಯಾಸ ನೆರವೇರಿಸಿದ ಸಿಎಂ ಸಿದ್ದರಾಮಯ್ಯ

# ಲಕ್ಕುಂಡಿ ಉತ್ಖನನಕ್ಕೆ ಭೂಮಿಪೂಜೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪ್ರವಾಸೋದ್ಯಮ ಇಲಾಖೆ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮೈಸೂರು ಹಾಗೂ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ಲಕ್ಕುಂಡಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ಖನನಕ್ಕೆ ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಿದರು.

ಸಿದ್ದರಾಮಯ್ಯ ಅವರ ಆಗಮನದ ಹಿನ್ನೆಲೆಯಲ್ಲಿ ಭೂಮಿಪೂಜೆಗಾಗಿ ನೂತನ ಬೆಳ್ಳಿಯ ಗುದ್ದಲಿ, ಸಲಾಕೆ ಸಿದ್ಧಪಡಿಸಲಾಗಿತ್ತು. ಭೂಮಿಪೂಜೆಯ ನಂತರ ಹಾಲಿನಿಂದ ಕೈತೊಳೆದುಕೊಂಡು ವಿಶೇಷ ಪೂಜೆಯಲ್ಲಿ ಭಾಗವಹಿಸಿ, ಶಿಲಾನ್ಯಾಸ ನೆರವೇರಿಸಿದರು. ನಂತರ ಕಾಶೀ ವಿಶ್ವನಾಥ ಹಾಗೂ ನನ್ನೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.



ಲಕ್ಕುಂಡಿಯಲ್ಲಿ ನಡೆದ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ನರಗುಂದ ಕ್ಷೇತ್ರದ ಮಾಜಿ ಶಾಸಕ ಬಿ.ಆರ್. ಯಾವಗಲ್ ಅವರನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿ, ಯಾವಗಲ್ ಅಭಿಮಾನಿಗಳು ಸಾಮಾಜಿಕ ಜಾಲತಾಣದಲ್ಲಿ ಆಕ್ರೋಶ ವ್ಯಕ್ತಪಡಿಸಿದರು. ಸಿಎಂ ಸ್ವಾಗತಕ್ಕೆ ಹಾಕಿದ್ದ ಬ್ಯಾನರ್‌ಗಳಲ್ಲಿ ಯಾವಗಲ್ ಅವರ ಭಾವಚಿತ್ರವಿರಲಿಲ್ಲ ಎಂದು ಅಭಿಮಾನಿಗಳು ಪಕ್ಷದ ವರಿಷ್ಠರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಕಾಶೀ ವಿಶ್ವನಾಥ ದೇವಸ್ಥಾನ ಭೇಟಿಯ ನಂತರ ಬಯಲು ವಸ್ತುಸಂಗ್ರಹಾಲಯಕ್ಕೆ ಭೇಟಿ ನೀಡಿದ ಸಿಎಂ ಸಿದ್ದರಾಮಯ್ಯ, ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲರ ಜೊತೆಗೂಡಿ ಬ್ಯಾಟರಿ ಚಾಲಿತ ವಾಹನದಲ್ಲಿ ಪ್ರದಕ್ಷಿಣೆ ಹಾಕುತ್ತಾ, ಇತಿಹಾಸಕಾರರಿಂದ ಅನ್ವೇಷಣೆಯಲ್ಲಿ ದೊರೆತ ಎಲ್ಲ ಪ್ರಾಚ್ಯಾವಶೇಷಗಳ ಮಾಹಿತಿ ಪಡೆದರು.

ನಂತರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಿದ್ದರಾಮಯ್ಯ, ಎಚ್.ಕೆ. ಪಾಟೀಲರು ಲಕ್ಕುಂಡಿ ಕುರಿತಾದ ಪುಸ್ತಕ ಕೊಟ್ಟಿದ್ದರು. ಆದರೆ ಅದನ್ನು ಓದಲು ಸಾಧ್ಯವಾಗಿರಲಿಲ್ಲ. ಈಗ ಇಲ್ಲಿನ ಐತಿಹಾಸಿಕ ದೇವಸ್ಥಾನ, ಪ್ರಾಚ್ಯಾವಶೇಷಗಳನ್ನು ನೋಡಿದ ಮೇಲೆ, ಆ ಪುಸ್ತಕವನ್ನು ಓದಲೇಬೇಕಿದೆ ಎಂದರು. ಇದೇ ಸಂದರ್ಭದಲ್ಲಿ ಬಯಲು ವಸ್ತುಸಂಗ್ರಹಾಲಯಕ್ಕೆ ಜಮೀನು ನೀಡಲು ರೈತರು ನೀಡಿದ ಒಪ್ಪಿಗೆ ಪತ್ರವನ್ನು ಸ್ವೀಕರಿಸಿ ಧನ್ಯವಾದಗಳನ್ನು ತಿಳಿಸಿದರು.

ಗದಗ ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ಉದ್ಘಾಟಿಸಬೇಕಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಲು ನೋವು ಇದ್ದ ಕಾರಣ ಮುಖ್ಯದ್ವಾರದ ಮೆಟ್ಟಿಲು ಏರಲು ಸಾಧ್ಯವಾಗಲಿಲ್ಲ. ಹೀಗಾಗಿ ರಂಗಮಂದಿರದ ಎಡ ಮತ್ತು ಬಲಭಾಗದಲ್ಲಿದ್ದ ಬಾಗಿಲುಗಳ ಮೂಲಕ ಅವರನ್ನು ಕರೆತರಲು ಸಚಿವ ಎಚ್.ಕೆ. ಪಾಟೀಲ ಮುಂದಾದರು. ಆದರೆ, ಆ ಬಾಗಿಲುಗಳನ್ನೂ ಸಕಾಲದಲ್ಲಿ ತೆರೆಯಲು ಸಾಧ್ಯವಾಗದ ಕಾರಣ ಅಲ್ಲಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ತೆರಳಿದರು.



ಸಮಾರಂಭದಲ್ಲಿ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ, ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್, ಸರಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ಶಾಸಕ ಸಿ.ಸಿ. ಪಾಟೀಲ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಪೂಜಾರ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಮಾಜಿ ಸಂಸದ ಐ.ಜಿ. ಸನದಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯತ್ ಸಿಇಓ ಭರತ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಲಕ್ಕುಂಡಿ ಪಾರಂಪರಿಕ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ, ಪಿಡಿಓ ಅಮೀರ ನಾಯಕ ಹಾಗೂ ಇತರರು ಉಪಸ್ಥಿತರಿದ್ದರು.

## ಲಕ್ಕುಂಡಿ ಉತ್ಖನನಕ್ಕೆ ಚಾಲನೆ ನೀಡಿದ ಸಿಎಂ ಸಿದ್ಧರಾಮಯ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಪ್ರವಾಸೋದ್ಯಮ ಇಲಾಖೆ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಮೈಸೂರು, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಗದಗ ಇವರ ಸಹಯೋಗದಲ್ಲಿ ಮಂಗಳವಾರ ಲಕ್ಕುಂಡಿಯ ಶ್ರೀ ಕೋಟೆ ವೀರಭದ್ರೇಶ್ವರ ದೇವಸ್ಥಾನ ಆವರಣದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ಉತ್ಖನನಕ್ಕೆ ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ ಚಾಲನೆ ನೀಡಿದರು.

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ, ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ಶಾಸಕರುಗಳಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಎನ್.ಎಚ್. ಕೋನರಡ್ಡಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಪೂಜಾರ, ಗ್ರಾ.ಪಂ ಉಪಾಧ್ಯಕ್ಷರು, ಸದಸ್ಯರು, ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಮಾಜಿ ಸಂಸದ ಐ.ಜಿ. ಸನದಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಸಿ.ಇ.ಓ ಭರತ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

### ಉದ್ದೇಶಿತ ಬಯಲು ವಸ್ತು ಸಂಗ್ರಹಾಲಯ ಪ್ರದೇಶದಲ್ಲಿ ಪತ್ರಿಕಾಗೋಷ್ಠಿ ನಡೆಸಿದ ಸಿಎಂ ಸಿದ್ದರಾಮಯ್ಯ

# ಅಗತ್ಯ ಅನುದಾನ ಒದಗಿಸಲಾಗುವುದು

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಲಕ್ಕುಂಡಿಯಲ್ಲಿ ಬಯಲು ವಸ್ತು ಸಂಗ್ರಹಾಲಯ ನಿರ್ಮಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಲಕ್ಕುಂಡಿಯ ಉದ್ದೇಶಿತ ಬಯಲು ವಸ್ತು ಸಂಗ್ರಹಾಲಯ ಪ್ರದೇಶದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಲಕ್ಕುಂಡಿ ಚಾಲುಕ್ಯರ ರಾಜಧಾನಿಯಾಗಿತ್ತು. ಅವರ ಕಾಲದಲ್ಲಿ ಅನೇಕ ದೇವಸ್ಥಾನ, ಕೋಟೆಗಳನ್ನು ಕಟ್ಟಿಸಿದ್ದರು. ಹೀಗಾಗಿ ಲಕ್ಕುಂಡಿ ಅಭಿವೃದ್ಧಿಗೆ 2017-18ರಲ್ಲಿ ನಮ್ಮ ಸರ್ಕಾರದ ಅವಧಿಯಲ್ಲೇ ಪ್ರಾಧಿಕಾರ ರಚನೆಯಾಗಿತ್ತು. ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲರ ಆಸಕ್ತಿಯಿಂದಾಗಿ ಇಲ್ಲಿ ಬಯಲು ವಸ್ತುಸಂಗ್ರಹಾಲಯ ನಿರ್ಮಾಣವಾಗಲಿದೆ. ಅದಕ್ಕೆ ಬೇಕಾದ ಅನುದಾನ ಒದಗಿಸಲಾಗುವುದು. ರಾಜ್ಯದಲ್ಲಿ ಅವಶ್ಯವಿರುವ ಕಡೆ ಉತ್ಖನನ ನಡೆಸಿ, ನಮ್ಮ ಪ್ರಾಚೀನ ಪರಂಪರೆ, ಇತಿಹಾಸವನ್ನು ಪರಿಚಯಿಸುವ ಕೆಲಸವನ್ನು ನಮ್ಮ ಸರ್ಕಾರ ಮಾಡಲಿದೆ ಎಂದರು.

ಇಲ್ಲಿ ದೊರೆತಿರುವ ಅವಶೇಷಗಳ ಪುನರುಜ್ಜೀವನಕ್ಕೆ ಸರ್ಕಾರದಿಂದ ಅನುದಾನ ಕೊಟ್ಟಿದ್ದೇವೆ. ಇದರಿಂದ ಐತಿಹಾಸಿಕ ಕುರುಹುಗಳನ್ನು ಸಂಗ್ರಹಿಸಲು, ರಕ್ಷಿಸಲು ಸಾಧ್ಯವಾಗಿದೆ ಎಂದರಲ್ಲದೆ, ಪ್ರಾಚ್ಯಾವಶೇಷಗಳು ದೊರೆತ ಸ್ಥಳದ ಜಾಗ ಮತ್ತು ಮನೆಗಳನ್ನು ಸರ್ಕಾರಕ್ಕೆ ಹಸ್ತಾಂತರಿಸಿದವರಿಗೆ ಧನ್ಯವಾದ ಅರ್ಪಿಸಿದರು.

ಕಾನೂನು, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ, ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ, ಸಂಸದರಾದ ಪಿ.ಸಿ. ಗದ್ದಿಗೌಡರ, ಶಾಸಕರುಗಳಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಎನ್.ಎಚ್. ಕೋನರಡ್ಡಿ, ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಪೂಜಾರ, ಗ್ರಾ ಪಂ ಉಪಾಧ್ಯಕ್ಷರು, ಸದಸ್ಯರು, ಮಾಜಿ ಸಚಿವ ಎಸ್. ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಮಾಜಿ ಸಂಸದ ಐ.ಜಿ. ಸನದಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಸಿ.ಇ.ಓ ಭರತ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.



ಪತ್ರಕರ್ತರ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಿಎಂ, ರಾಜ್ಯದ ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವ ಯಾರೇ ಆದರೂ, ಎಷ್ಟೇ ಪ್ರಭಾವಿ ಆದರೂ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರಲ್ಲದೆ, ಕಾನೂನು ಉಲ್ಲಂಘಿಸಿ ಕ್ರಿಮಿನಲ್ ಕೆಲಸ ಮಾಡಿ, ಬಳಿಕ ಧರ್ಮದ ಹೆಸರು ಹೇಳುವುದು ತಪ್ಪಲ್ಲವೇ ಎಂದು ಪ್ರಶ್ನಿಸಿದರು.


## ಸಂಪೂರ್ಣ ಶಿಕ್ಷಣ ಇದುವರೆಗೂ ಸಾಧ್ಯವಾಗಿಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ

ಅಂಬೇಡ್ಕರ್ ಅವರು ಕೊಟ್ಟಿರುವ ಶಿಕ್ಷಣ-ಸಂಘಟನೆ-ಹೋರಾಟ ಎನ್ನುವ ಮಂತ್ರವನ್ನು ಎಲ್ಲರೂ ಪಾಲಿಸಬೇಕು. ಸಂವಿಧಾನ ಜಾರಿಯಾಗಿ 75 ವರ್ಷವಾದರೂ ಸಂಪೂರ್ಣ ಶಿಕ್ಷಣ ಇದುವರೆಗೂ ಸಾಧ್ಯವಾಗಿಲ್ಲ ಎಂದು ಸಿ.ಎಂ ಸಿದ್ದರಾಮಯ್ಯ ತಿಳಿಸಿದರು.

ಮಂಗಳವಾರ ಗದುಗಿನ ಕರ್ನಾಟಕ ಕುರುಬರ ಸಂಘ ಆಯೋಜಿಸಿದ್ದ ಕರ್ನಾಟಕ ಕುರುಬರ ಸಹಕಾರ ಪತ್ತಿನ ಸಂಘದ ಶತಮಾನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನೂರು ವರ್ಷಗಳ ಹಿಂದೆಯೇ ಕುರುಬ ಸಮಾಜವನ್ನು ಸಂಘಟಿಸಿ ಸಹಕಾರ ಸಂಘ ಸ್ಥಾಪಿಸಿದ್ದು ಅತ್ಯಂತ ಮುಂದಾಲೋಚನೆಯ, ಸಾಮಾಜಿಕ ನ್ಯಾಯದ ಕಾರ್ಯ. ಶಿಕ್ಷಣ-ಸಂಘಟನೆ-ಹೋರಾಟ ಅಂಬೇಡ್ಕರ್ ಅವರು ದೇಶದ ಹಿಂದುಳಿದವರಿಗೆ ಕೊಟ್ಟಿರುವ ಮಂತ್ರ. ಆದರೆ, ಸಂವಿಧಾನ ಜಾರಿಗೆ ಮೊದಲೇ ಮುಂದಾಲೋಚನೆಯಿಂದ ಪತ್ತಿನ ಸಹಕಾರ ಸಂಘ ಸ್ಥಾಪಿಸಿರುವುದು ಅತ್ಯಂತ ಶ್ಲಾಘನೀಯ ಕಾರ್ಯ ಎಂದರು.




ಸಮಾಜದಲ್ಲಿ ಆರ್ಥಿಕವಾಗಿ, ಸಾಮಾಜಿಕವಾಗಿ ಶೂದ್ರ ವರ್ಗದ ಜನ ಹಿಂದುಳಿಯಲು ಅವರು ಅಕ್ಷರ ಸಂಸ್ಕೃತಿಯಿಂದ ವಂಚಿತರಾಗಿದ್ದೇ ಪ್ರಮುಖ ಕಾರಣ. ಶೂದ್ರರು, ದಲಿತರು ಮಾತ್ರ ಶಿಕ್ಷಣ ಪಡೆಯುವಂತಿರಲಿಲ್ಲ. ಅಂಬೇಡ್ಕರ್ ಅವರ ಜೀವಮಾನದ ಹೋರಾಟವೇ ಈ ಅಸಮಾನತೆಯನ್ನು ಅಳಿಸುವುದಾಗಿತ್ತು. ಇದಕ್ಕೆ ಶಿಕ್ಷಣವೇ ಪ್ರಮುಖ ಅಸ್ತ್ರ ಎಂದು ಅಂಬೇಡ್ಕರ್ ಮನಗಂಡಿದ್ದರು.

ಶಿಕ್ಷಣ ದೊರಕದಿದ್ದರೆ ಸ್ವಾಭಿಮಾನಿಗಳಾಗಿ ಇರಲು ಸಾಧ್ಯವೇ ಇಲ್ಲ. ನನಗೆ ರಾಜಪ್ಪ ಎನ್ನುವ ಶಿಕ್ಷಕರು ಸಿಗದೇ ಹೋಗಿದ್ದರೆ ನನಗೆ ಶಿಕ್ಷಣವೂ ಸಿಗುತ್ತಿರಲಿಲ್ಲ, ನಾನು ಮುಖ್ಯಮಂತ್ರಿಯೂ ಆಗುತ್ತಿರಲಿಲ್ಲ. ಹಸು ಮೇಯಿಸಿಕೊಂಡು ಇರಬೇಕಾಗಿತ್ತು ಎಂದರು.

ಅದಕ್ಕೇ ನಮ್ಮ ಸರ್ಕಾರ ಶಿಕ್ಷಣ-ಆರೋಗ್ಯ-ಅನ್ನಕ್ಕೆ ಪ್ರಮುಖ ಆದ್ಯತೆ ನೀಡುತ್ತಿದೆ. ಅಂಬೇಡ್ಕರ್, ಬಸವಣ್ಣ, ಮಹಾತ್ಮ ಗಾಂಧಿಯವರ ಆಶಯಗಳು ಈಡೇರಬೇಕಾದರೆ ಸರ್ವರಿಗೂ ಶಿಕ್ಷಣ ಸಿಗಬೇಕು, ಎಲ್ಲರಿಗೂ ಆರ್ಥಿಕ ಶಕ್ತಿ ಬರಬೇಕು ಎಂದರು.

### ಕರ್ನಾಟಕ ಕುರುಬರ ಸಂಘದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

## ಸ್ವಾತಂತ್ರ್ಯ ಹೋರಾಟದಲ್ಲಿ ಕುರುಬರ ಪಾತ್ರ ಹಿರಿದು

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಬೈ ಕರ್ನಾಟಕದ ಇತಿಹಾಸ ನೋಡಬೇಕಾದರೆ ಕುರುಬರ ಸಂಘಗಳ ಇತಿಹಾಸ ಗಮನಿಸುವುದು ಅವಶ್ಯವಾಗಿದೆ. ಸ್ವಾತಂತ್ರ್ಯ ಹೋರಾಟದಲ್ಲಿ ಕುರುಬ ಸಮಾಜದ ಕೊಡುಗೆ ಬಹುಜನರಿಗೆ ಗೊತ್ತಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ದಿ. ಕರ್ನಾಟಕ ಕುರುಬರ ಸಂಘ ಆಯೋಜಿಸಿದ್ದ ಕರ್ನಾಟಕ ಕುರುಬರ ಸಹಕಾರ ಪತ್ತಿನ ಸಂಘದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

ಈ ಬಗ್ಗೆ ಇತಿಹಾಸದಲ್ಲಿ ಕಡಿಮೆ ಪ್ರಮಾಣದಲ್ಲಿ ದಾಖಲಿಸಲಾಗಿದೆ. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಕುರುಬ ಸಮಾಜದ ಮಹಿಳೆಯರಾದ ಶಿರಹಟ್ಟಿಯ ಯಲ್ಲಮ್ಮ ಕಮಿತ ಹಾಗೂ ಈರಮ್ಮ ಕರಿಯಪ್ಪ ಏರೆಸೀಮೆ ಅವರುಗಳು ಗರ್ಭಿಣಿಯಾಗಿದ್ದರೂ ಹೋರಾಟದಲ್ಲಿ ಪಾಲ್ಗೊಂಡು ಜೈಲಿನಲ್ಲಿ ಮಕ್ಕಳನ್ನು ಹೆತ್ತು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪಾಲ್ಗೊಂಡಿರುವದು ಇತಿಹಾಸದಿಂದ ತಿಳಿದು ಬಂದಿದೆ. ಈ ಸಂದರ್ಭದಲ್ಲಿ ಪೌರಾಡಳಿತ ಸಚಿವ ರಹೀಮ್ ಖಾನ್, ಅಜ್ಜಂಪಿರ್ ಖಾದ್ರಿ, ಶಾಸಕರಾದ ಬಸವರಾಜ ಶಿವಣ್ಣನವರ, ಶಾಸಕರಾದ ಸಿ.ಸಿ. ಪಾಟೀಲ, ಜಿ.ಎಸ್. ಪಾಟೀಲ, ಎನ್.ಎಚ್. ಕೋನರಡ್ಡಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಸಲೀಂ ಅಹಮ್ಮದ, ಮಾಜಿ ಸಂಸದ ಐ.ಜಿ. ಸನದಿ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ರಾಮಣ್ಣ ಲಮಾಣಿ, ಕುಸುಮ ಶಿವಳ್ಳಿ ಮುಂತಾದವರು ಉಪಸ್ಥಿತರಿದ್ದರು. ಡಾ. ಶ್ರೀಧರ ಕುರುಡಗಿ ಸ್ವಾಗತಿಸಿದರು. ಅಧ್ಯಕ್ಷತೆ ವಹಿಸಿದ್ದ ವಾಸಣ್ಣ ಕುರಡಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಾಹುಬಲಿ ಜೈನರ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಶತಮಾನೋತ್ಸವದ ನೆನಪಿನ ಕಾಣಿಕೆ, ಶತಮಾನೋತ್ಸವದ ಲಾಂಛನ, ಶತಮಾನೋತ್ಸವದ ಕೈಪಿಡಿಗಳನ್ನು ಬಿಡುಗಡೆ ಮಾಡಲಾಯಿತು.




ಈ ಹಿಂದೆ ರಜಾಕರ ಹಾವಳಿ ಹೆಚ್ಚಾದಾಗ ಸ್ವಾತಂತ್ರ್ಯ ಹೋರಾಟಗಾರ ಕೋಲೂರು ಮಲ್ಲಪ್ಪ ಅವರಿಗೆ ಇದೇ ಹನುಮಂತಪ್ಪ ಕುರಡಗಿ ಅವರ ಕುಟುಂಬವು ಆಶ್ರಯ ನೀಡಿರುವುದು ಹೆಮ್ಮೆಯ ವಿಷಯವಾಗಿದೆ. ಅಲ್ಲದೆ, ಸಹಕಾರ ಚಳುವಳಿ ಹುಟ್ಟು ಹಾಕಿದ್ದ ಗದಗ ಜಿಲ್ಲೆಯ ಕಣಗಿನಹಾಳದ ಸಿದ್ದನಗೌಡ ಪಾಟೀಲರು ಕುರುಬ ಸಮುದಾಯದವರು ಎನ್ನುವುದು ನಾವೆಲ್ಲರೂ ಹೆಮ್ಮೆ ಪಡುವ ವಿಷಯವಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

# ಬಸ್ ಪಾಸ್ ಪಡೆಯಲು ಅವಕಾಶ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳು ಸೇವಾಸಿಂಧು ಆನ್‌ಲೈನ್ ಪೋರ್ಟಲ್ (https://sevasindhuservices.karnataka.gov.in//) ಮುಖೇನ ಅರ್ಜಿ ಸಲ್ಲಿಸಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಯಲ್ಲಿನ ಹುಬ್ಬಳ್ಳಿ, ಹುಬ್ಬಳ್ಳಿ-ಧಾರವಾಡ ನಗರ ಸಾರಿಗೆ, ಧಾರವಾಡ, ಗದಗ, ಬಾಗಲಕೋಟ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬೆಳಗಾವಿ, ವಿಭಾಗಗಳ ವ್ಯಾಪ್ತಿಯ ಕರ್ನಾಟಕ ಒನ್ ಕೇಂದ್ರ ಹಾಗೂ ಸಂಸ್ಥೆಯ ಪ್ರಮುಖ ಬಸ್ ನಿಲ್ದಾಣಗಳಲ್ಲಿನ ಪಾಸ್ ಕೌಂಟರ್‌ಗಳಿಂದ ಪಾಸ್ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ವಿದ್ಯಾರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ಸೇವಾಸಿಂಧು ಆನ್‌ಲೈನ್ ಪೋರ್ಟಲ್ ಮುಖಾಂತರ ಅರ್ಜಿ ಸಲ್ಲಿಸಿ, ಸಂಸ್ಥೆಯು ನಿಗದಿಪಡಿಸಿದ ಬಸ್ ಕೌಂಟರ್‌ಗಳಲ್ಲಿ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ವಿದ್ಯಾರ್ಥಿ ಉಚಿತ ಹಾಗೂ ರಿಯಾಯಿತಿ ಬಸ್ ಪಾಸ್‌ಗಳನ್ನು ಪಡೆಯಬಹುದಾಗಿದೆ. ವಿದ್ಯಾರ್ಥಿಗಳು ಸದರಿ ಸೌಲಭ್ಯದ ಸದುಪಯೋಗಪಡೆದುಕೊಳ್ಳುವಂತೆ ಸೂಚಿಸಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ಪ್ರಕಟಣೆಯಲ್ಲಿ ತಿಳಿಸಿದೆ.



ಗದಗ ನಗರದ ಝೇಂಡಾ ವೃತ್ತದ ಹತ್ತಿರವಿರುವ ಭಾರತೀಯ ರೈಲ್ವೆ ಹಳಿ ದಾಟಲು ನಿರ್ಮಾಣ ಮಾಡಿದ, ಗದಗ-ಬೆಟಗೇರಿ ಅವಳಿ ನಗರಕ್ಕೆ ಸಂಪರ್ಕ ಕಲ್ಪಿಸುತ್ತಿರುವ ಮೇಲ್ಸೇತುವೆಯ ಕೆಳ ಭಾಗದಲ್ಲಿರುವ ರೈಲ್ವೆ ಇಲಾಖೆಯ ಹೈಟೆನ್ಶನ್ ವಿದ್ಯುತ್ ತಂತಿಗಳಿಂದ ಸಾರ್ವಜನಿಕರಿಗೆ ತೊಂದರೆಯಾಗದಿರಲು ಹಾಗೂ ಸುರಕ್ಷತೆಗಾಗಿ ಅಳವಡಿಸಿದ ಸುರಕ್ಷಾ ಕವಚಗಳು ಕೆಳಗೆ ಬಿದ್ದಿದ್ದು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಅಪಘಾತ ಸಂಭವಿಸುವ ಮುನ್ನ ಸುರಕ್ಷಾ ಕವಚವನ್ನು ಸರಿಪಡಿಸಬೇಕೆಂದು ಸಾಮಾಜಿಕ ಕಾರ್ಯಕರ್ತ ವಿಶ್ವನಾಥ ಶೀರಿ ವಿನಂತಿಸಿದ್ದಾರೆ.

# ಕ್ರೀಡಾಪಟುಗಳ ಪ್ರವೇಶಕ್ಕೆ ವಿಶೇಷ ಆಯ್ಕೆ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ 2025-26ನೇ ಸಾಲಿನಲ್ಲಿ ಕ್ರೀಡಾ ವಸತಿ ಸಾಲೆ/ ನಿಲಯಗಳಿಗೆ 8ನೇ ತರಗತಿ ಮತ್ತು ಪ್ರಥಮ ಪಿ.ಯು.ಸಿ ಮಟ್ಟದ ಅರ್ಹ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಪ್ರವೇಶಾವಕಾಶ ಕಲ್ಪಿಸಲುವ ನಿಟ್ಟಿನಲ್ಲಿ ಈಗಾಗಲೇ ಜಿಲ್ಲಾ ಹಾಗೂ ವಿಭಾಗ ಮಟ್ಟದಲ್ಲಿ ಆಯ್ಕೆ ಪ್ರಕ್ರಿಯೆ ನಡೆಸಲಾಗಿರುತ್ತದೆ.

ಆದರೆ ಸದರಿ ಆಯ್ಕೆ ಶಿಬಿರಗಳಲ್ಲಿ ವಿವಿಧ ಕಾರಣಗಳಿಂದ ಬಾಗವಹಿಸಲು ಸಾಧ್ಯವಾಗದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶವನ್ನು ನೀಡುವ ದೃಷ್ಟಿಯಿಂದ ರಾಜ್ಯದ ಕೆಲವು ಸ್ಥಳಗಳಲ್ಲಿ ವಿಶೇಷ ಆಯ್ಕೆ ಶಿಬಿರಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ.

ಈ ವಿಶೇಷ ಆಯ್ಕೆ ಶಿಬಿರದಲ್ಲಿ ರಾಜ್ಯದ ಯಾವುದೇ ಭಾಗದ ಕ್ರೀಡಾಪಟುಗಳು ಭಾಗವಹಿಸಲು ಮುಕ್ತ ಅವಕಾಶವಿದೆ. 2025-26ನೇ ಸಾಲಿನ ಪ್ರವೇಶಕ್ಕೆ ಈಗಾಗಲೇ ಆಯೋಜಿಸಲಾದ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸದ ಅಭ್ಯರ್ಥಿಗಳು ಈ ವಿಶೇಷ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸಬಹುದು.

ಈಗಾಗಲೇ ಆಯ್ಕೆ ಶಿಬಿರಗಳಲ್ಲಿ ಭಾಗಿಯಾಗಿರುವ, ಹಾಗೂ ರಾಜ್ಯ ಮಟ್ಟದ ಆಯ್ಕೆ ಶಿಬಿರಕ್ಕೆ ಆಯ್ಕೆಯಾಗದ ಅಭ್ಯರ್ಥಿಗಳು ತಮ್ಮ ಪ್ರದರ್ಶನವನ್ನು ಉತ್ತಮಪಡಿಸಿಕೊಳ್ಳಲು ಉದ್ದೇಶಿಸಿದಲ್ಲಿ ಈ ಬಗ್ಗೆ ಅರ್ಜಿ ನಮೂನೆಯಲ್ಲಿ ಕಡ್ಡಾಯವಾಗಿ ದಾಖಲಿಸಿ ವಿಶೇಷ ಆಯ್ಕೆ ಶಿಬಿರದಲ್ಲಿ ಭಾಗವಹಿಸಬಹುದು.

8ನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಪ್ರಸ್ತುತ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, 8ನೇ ತರಗತಿ ಪ್ರವೇಶಕ್ಕೆ ಜೂನ್-2025 ಕ್ಕೆ ಅನ್ವಯವಾಗುವಂತೆ 14 ವರ್ಷ ವಯಸ್ಸಿನ ಒಳಗೆ ಇರಬೇಕು.

ಪ್ರಥಮ ಪಿ.ಯು.ಸಿ. ಪ್ರವೇಶ ಬಯಸುವ ಅಭ್ಯರ್ಥಿಗಳ ವಯಸ್ಸು ಜೂನ್-2025ಕ್ಕೆ ಅನ್ವಯವಾಗುವಂತೆ 18 ವರ್ಷ ವಯಸ್ಸಿನ ಒಳಗೆ ಇರಬೇಕು. ಈ ವಿಶೇಷ ಆಯ್ಕೆ ಶಿಬಿರಗಳಲ್ಲಿ ಕ್ರೀಡಾ ವಿಭಾಗಗಳಿಗೆ ಸಂಬಂಧಿಸಿದಂತೆ ಆಯ್ಕೆ ಪ್ರಕ್ರಿಯೆಗಳನ್ನು ಕೈಗೊಳ್ಳಲು ಆದೇಶಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಸಂಪರ್ಕಿಸಲು ಕೋರಿದೆ.


### ರಾಯರ ಮೃತ್ತಿಕಾ ಬೃಂದಾವನ ಪ್ರತಿಷ್ಠಾಪನೆ ಅಂಗವಾಗಿ ಪ್ರಯೋಗಿಸಿದ ನಾಟಕ

# ಪ್ರೇಕ್ಷಕರನ್ನು ಸೆಳೆದ 'ಧೀರ ಶ್ರೀರಾಘವೇಂದ್ರ ವೃತಿವರ'

■ ವಿಜಯಸಾಕ್ಷಿ ಸುದ್ದಿ, ಗದಗ

ಗುರುಸಾರ್ವಭೌಮ, ಕಲಿಯುಗದ ಕಾಮಧೇನು, ಬೃಂದಾವನದಲ್ಲಿ ನೆಲೆಸಿ ಇಂದಿಗೂ ಭಕ್ತರನ್ನು ಪೊರೆವ ಶ್ರೀರಾಘವೇಂದ್ರ ಮಹಾಸ್ವಾಮಿಗಳು ವೃಂದಾವನಸ್ಥರಾಗುವ ಮೊದಲಿನ ಹಾಗೂ ವೃಂದಾವನಸ್ಥರಾದ ಮೇಲಿನ ಕೆಲವು ಸನ್ನಿವೇಶಗಳೊಳಗೊಂಡ ನಾಟಕ 'ಧೀರ ಶ್ರೀರಾಘವೇಂದ್ರ ವೃತಿವರ' ಯಶಸ್ವಿಯಾಗಿ ಪ್ರಯೋಗಗೊಂಡಿತು.

ಜಗದ್ಗುರು ಶ್ರೀಮನ್ ಮಧ್ವಾಚಾರ್ಯ ಮೂಲ ಮಹಾಸಂಸ್ಥಾನ ಮಂತ್ರಾಲಯ ಆಶ್ರಯದಲ್ಲಿ, ಗದಗ ನಗರದ ಕಳಸಾಪೂರ ರಸ್ತೆಯಲ್ಲಿ ನಿರ್ಮಾಣವಾಗಿರುವ ಶಾಖಾ ಮಠದ ಶ್ರೀರಾಘವೇಂದ್ರ ರಾಯರ ಮೃತ್ತಿಕಾ ಬೃಂದಾವನ ಪ್ರತಿಷ್ಠಾಪನೆ ಅಂಗವಾಗಿ ಗದುಗಿನ ಶ್ರೀರಾಘವೇಂದ್ರ ಕಲಾ ಬಳಗದವರಿಂದ ಈಗಿನ ಪೀಠಾಧಿಪತಿಗಳಾದ ಶ್ರೀ ಸುಭುದೇಂದ್ರ ಶ್ರೀಪಾದಂಗಳವರ ಸಾನ್ನಿಧ್ಯದಲ್ಲಿ ನಾಟಕ ಪ್ರಯೋಗಿಸಲ್ಪಟ್ಟು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.



ಶ್ರೀರಾಘವೇಂದ್ರ ಕಲಾ ಬಳಗ ಗುರುರಾಘವೇಂದ್ರ ರಾಯರ ಮೃತ್ತಿಕಾ ಬೃಂದಾವನ ಪ್ರತಿಷ್ಠಾಪನೆ ಅಂಗವಾಗಿ ಅಭಿನಯಿಸಿದ 'ಧೀರ ಶ್ರೀರಾಘವೇಂದ್ರ ವೃತಿವರ' ನಾಟಕವನ್ನು ಮಂತ್ರಾಲಯದ ಈಗಿನ ಪೀಠಾಧಿಪತಿಗಳಾದ ಶ್ರೀಸುಭುಧೇಂದ್ರ ಶ್ರೀಪಾದಂಗಳವರು ವೀಕ್ಷಿಸಿದ್ದು ವಿಶೇಷವಾಗಿತ್ತು. ನಾಟಕ ವೀಕ್ಷಿಸಿ ಮೆಚ್ಚುಗೆ ದಯಪಾಲಿಸಿದ ಶ್ರೀಗಳು, ಈ ನಾಟಕ ಮಂತ್ರಾಲಯ ಸನ್ನಿಧಾನದಲ್ಲಿ ಒಮ್ಮೆ ಪ್ರದರ್ಶನವಾಗಬೇಕು ಎಂಬ ಇಚ್ಛೆಯನ್ನು ವ್ಯಕ್ತಪಡಿಸಿ ಆಶೀರ್ವದಿಸಿದರು.

ಶ್ರೀ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಅವರ ಸಮರ್ಥ ನಿರ್ದೇಶನದೊಂದಿಗೆ, ಸತ್ವಯುತ ಸಂಭಾಷಣೆಗಳೊಂದಿಗೆ ಸುಂದರವಾಗಿ ಹೆಣೆದ ಸನ್ನಿವೇಶಗಳ ಕಥಾ ಹಂದರ ಸೊಗಸಾಗಿ ಮೂಡಿಬಂದಿತು. ರಂಗನಟ ಮೌನೇಶ ಚಿ.ಬಡಿಗೇರ(ನರೇಗಲ್ಲ) ಅವರು ಶ್ರೀಗುರು ರಾಘವೇಂದ್ರ ಮಹಾಸ್ವಾಮಿಗಳ ಪಾತ್ರದಲ್ಲಿ ತದ್ರೂಪದಂತೆ ಕಂಡುಬರುವುದರೊಂದಿಗೆ ಪ್ರತಿ ಸನ್ನಿವೇಶದಲ್ಲಿ ಪ್ರೇಕ್ಷಕರನ್ನು ಮಂತ್ರಮಗ್ನರನ್ನಾಗಿಸಿ ಮನೋಜ್ಞವಾಗಿ ಅಭಿನಯಿಸಿದ್ದು, ನೈಜ ಸನ್ನಿವೇಶ ಕಣ್ಣಮುಂದೆ ಕಟ್ಟುವಂತಿತ್ತು.

ಪ್ರತಿ ಸಂಭಾಷಣೆಗೂ ಪ್ರೇಕ್ಷಕರ ಚಪ್ಪಾಳೆಗಳ ಸುರಿಮಳೆ ಸಹಜವಾಗಿತ್ತು. ರಾಯರಾಗಿ ಅಭಿನಯಿಸಿದ ಮೌನೇಶ ಬಡಿಗೇರ ಅವರ ಸನ್ನಿವೇಶಗಳಲ್ಲಿ ವೆಂಕಣ್ಣನಾಗಿ ಸುರಭಿ ಮಹಾಶಬ್ದೆ, ನವಾಬನಾಗಿ ಶರಾವತಿ ಸುತಾರ, ಕೃಷ್ಣನಾಗಿ ವಾಣಿಶ್ರೀ ನಾಡಿಗೇರ ಹಾಗೂ ಮಂಚಾಲಮ್ಮನಾಗಿ ಅಂಕಿತಾ ಬೊಮ್ಮಣಗಿ, ಯೋಗೇಂದ್ರರಾಗಿ ಸನತ್ ದೀಪಾಲಿ ಮನಮುಟ್ಟುವಂತೆ ಅಭಿನಯಿಸಿದರು. ರಾಯರ ಅಂತರಂಗದ ಶಿಷ್ಯರಾದ ಅಪ್ಪಣ್ಣಾಚಾರ್ಯರ ಪಾತ್ರದಲ್ಲಿ ಹಿರಿಯ ರಂಗಕಲಾವಿದರಾದ ಮುರಲೀಧರ ಸಂಕನೂರ ಗಮನ ಸೆಳೆದರು. ಹಿರಿಯ ರಂಗಕಲಾವಿದರು ಹಾಗೂ ಸಾಹಿತಿಗಳಾದ ಅಂದಾನೆಪ್ಪ ವಿಭೂತಿ ಅವರು ವಿಜಯದಾಸರಾಗಿ ಪಾತ್ರಕ್ಕೆ ಕಳೆಕಟ್ಟಿದರು. ಉಜ್ವಲ್ ಕಬಾಡಿ ಮೇಜರ್ ಮನ್ರೊ, ಶರದ್ಧಾ ಕಬಾಡಿ ಸಹಾಯಕ, ಶ್ವೇತಾ ಸುರೇಬಾನ ಭಾಗಣ್ಣನಾಗಿ, ಮೇಘಾ ಗಡಿಸಾಗರ ಜಗನ್ನಾಥದಾಸರಾಗಿ, ಸಂಜನಾ ದೀಪಾಲಿ ಪ್ರಾಣೇಶದಾಸರಾಗಿ, ಮಹೇಶ ಸಂದಿಗೂಡು ವಾದೀಂದ್ರರಾಗಿ ತಮ್ಮ ಪಾತ್ರಗಳಿಗೆ ಜೀವ ತುಂಬಿದರು.

ಹಿರಿಯ ಪ್ರಸಾಧನ ಕಲಾವಿದ ರಂಗಪ್ಪ ಹುಯಿಲಗೋಳ ಅವರ ಪುತ್ರ ಗಣೇಶ ಹುಯಿಲಗೋಳ ಅವರ ಹಾಗೂ ಶ್ರೀನಿವಾಸ ಹಡಪದ ಅವರ ಪ್ರಸಾಧನ ಎಲ್ಲರ ಗಮನ ಸೆಳೆಯಿತು.

ವಿಶೇಷವಾಗಿ ರಾಯರ ಪರಮ ಭಕ್ತರಾದ ಶ್ರೀನಿವಾಸ ಹುಬ್ಬಳ್ಳಿ, ಕಿರಟಗೇರಿಯ ಕಲ್ಮೇಶಯ್ಯ ಹಿರೇಮಠ ಅವರ ಸಹಕಾರ ಹಾಗೂ ನಾಟಕ ಪ್ರಯೋಗಕ್ಕೆ ಆಹ್ವಾನ ನೀಡಿದ ಮುಖಂಡರಾದ ಗುರುರಾಜ ಹೆಬಸೂರ ಅವರ ಸಹಕಾರಕ್ಕೆ ಕಲಾಬಳಗ ಅಭಿನಂದಿಸಿದೆ.

ವಿಶ್ವನಾಥ ಬೇಂದ್ರೆ ಸ್ವಾಮಿರಾಯನಾಗಿ ಹಾಗೂ ಅನ್ವಿತಾ ಹುಯಿಲಗೋಳ ಪಿಶಾಚಿಯಾಗಿ ಅಭಿನಯಿಸಿದ ಸನ್ನಿವೇಶ ಪ್ರೇಕ್ಷಕರನ್ನು ನಗೆಗಡಲಲ್ಲಿ ತೇಲಿಸಿ, ಚಪ್ಪಾಳೆಗಳನ್ನು ಗಿಟ್ಟಿಸಿತು. ಅಪ್ಪಾವರ ಪಾತ್ರದಲ್ಲಿ ರಾಘವೇಂದ್ರ ಮುಜುಮದಾರ ಮತ್ತು ಆನಂದದಾಸರ ಪಾತ್ರ ನಿರ್ವಹಿಸಿದ ಶುಭಾಂಗಿ ದ್ಯಾಮೇನಹಳ್ಳಿ ಅವರ ಸನ್ನಿವೇಶ ಅತ್ಯಂತ ಪರಿಣಾಮಕಾರಿಯಾಗಿ ಮೂಡಿಬಂದಿತು.

ರಚನೆ ನಿರ್ದೇಶನದೊಂದಿಗೆ ಬೆಳಕು, ಧ್ವನಿ ಹಾಗೂ ಹಿನ್ನೆಲೆ ಸಂಗೀತ ಮತ್ತು ದೃಶ್ಯಗಳಿಗೆ ತಕ್ಕಂತೆ ಭಕ್ತಿಗೀತೆಗಳ ಸಂಯೋಜನೆ ಕೂಡಾ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಅವರದಾಗಿತ್ತು. ಪ್ರತಿ ಸನ್ನಿವೇಶದಲ್ಲಿ ಹಿನ್ನೆಲೆ ಹಾಡುಗಳು ಪ್ರೇಕ್ಷಕರನ್ನು ತಲೆದೂಗುವಂತೆ ಮಾಡಿದ್ದು ನಾಟಕದ ಜೀವಾಳವಾಗಿತ್ತು.

# 'ತಂತ್ರ' ಚಿತ್ರಕ್ಕೆ ಪ್ರಶಸ್ತಿಗಳ ಸುರಿಮಳೆ




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿಲ್ವರ್‌ಸ್ಕೈ ಪ್ರೊಡಕ್ಷನ್ ಸಿನಿಮಾ ಸಂಸ್ಥೆ ನಿರ್ಮಿಸಿರುವ ಕುತೂಹಲಭರಿತ 'ತಂತ್ರ' ಕನ್ನಡ ಚಲನಚಿತ್ರಕ್ಕೆ ತೆಲಂಗಾಣ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ-2025ರಲ್ಲಿ ಎರಡು ವಿಭಾಗದಲ್ಲಿ ಪ್ರಶಸ್ತಿ ಪಡೆದಿದ್ದಲ್ಲದೆ, ಜಿಆಯ್‌ಎಫ್‌ಸಿ ಚಲನಚಿತ್ರೋತ್ಸವಕ್ಕೂ ಚಿತ್ರ ಆಯ್ಕೆ ಆಗಿದೆ. ಭಾರತೀಯ ಚಲನಚಿತ್ರ ನಿರ್ಮಾಪಕರ ಸಂಘವು ತೆಲಂಗಾಣದಲ್ಲಿ ಆಯೋಜಿಸಿದ್ದ ಚಲನಚಿತ್ರೋತ್ಸವವು ಐಎಫ್‌ಎಮ್‌ಎ ರಾಷ್ಟ್ರೀಯ ಕಾರ್ಯದರ್ಶಿ ಪುಲಗಂ ರಾಮಚಂದ್ರ ರೆಡ್ಡಿ ಮತ್ತು ರಾಷ್ಟ್ರೀಯ ಅಧ್ಯಕ್ಷ ದಿಲೀಪಕುಮಾರ್ ಎಚ್. ಆರ್ ಅವರ ಅಧ್ಯಕ್ಷತೆಯಲ್ಲಿ ನೆರವೇರಿತು. ಬೆಸ್ಟ್ ಹಾರರ್ ಫಿಲ್ಮ್, ಬೆಸ್ಟ್ ರಿ-ರೆಕಾರ್ಡಿಂಗ್ ಸೌಂಡ್ ವಿಭಾಗಗಳಲ್ಲಿ ಪ್ರಶಸ್ತಿ ಪಡೆದಿದೆ. ಬೆಂಗಳೂರು, ಬೆಳಗಾವಿ, ಸಂಕೇಶ್ವರ, ಹುಬ್ಬಳ್ಳಿ-ಧಾರವಾಡ ಸುತ್ತಮುತ್ತ ಚಿತ್ರೀಕರಣ ನಡೆಸಲಾದ ಈ ಚಿತ್ರದಲ್ಲಿ ನಾಯಕರಾಗಿ ಶಶಿಕಾಂತ್, ನಾಯಕಿಯರಾಗಿ ಸೌಜನ್ಯ ಮತ್ತು ಮೇಘಾ, ಎರಡನೇ ನಾಯಕನಾಗಿ ನಟ ವಿಕ್ರಾಂತ್, ಪ್ರಮುಖ ಪಾತ್ರದಲ್ಲಿ ಸಾಮ್ರಾಟ್ ನಟಿಸಿದ್ದಾರೆ. ಪಾರು ದಾವಣಗೆರೆ ವಿಶೇಷವಾದ ಗೀತೆಯಲ್ಲಿ ಹೆಜ್ಜೆ ಹಾಕಿದ್ದಾರೆ. ಹಾಸ್ಯ ಪಾತ್ರದಲ್ಲಿ ಜೈ ಅಮೋಘ ದಾಸ್ ಅಲ್ಲದೆ ಸಂತೋಷ್ ಕೇರಿ ಎಂಬ ಜನಪ್ರಿಯ ಯೂಟ್ಯೂಬರ್ ಸಹ ಪ್ರಮುಖ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ.

ಛಾಯಾಗ್ರಹಣ-ರೋಹನ ದೇಸಾಯಿ, ವರ್ಧನ ಬಾಗಲಕೋಟೆ, ಕಥೆ-ವಿಶ್ವನಾಥ, ಶಶಿಕಾಂತ, ಸಾಮ್ರಾಟ, ಚಿತ್ರಕಥೆ, ಸಂಭಾಷಣೆ-ವಿಶ್ವನಾಥ, ಸಾಮ್ರಾಟ, ಸಂಗೀತ ರಮೇಶ್ ಕೃಷ್ಣ, ರೋಹನ್ ದೇಸಾಯಿ ಅವರದ್ದಿದೆ. ಮೂರು ಹಾಡುಗಳಿಗೆ ಮಾಳು ನಿಪನಾಳ, ಪ್ರಣತಿ ರಾವ್, ಆರಿಫ್ ಅಸ್ಲಾಂ, ಮೇಘನಾ ಕುಲಕರ್ಣಿ ಧ್ವನಿ ನೀಡಿದ್ದಾರೆ. ಸಂಕಲನ/ಡಿಐ ಓಂ ಸರವಣನ್, ಪತ್ರಿಕಾ ಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಅವರದಿದೆ.

ಚಿತ್ರವನ್ನು ವಿಜಯಪುರದ ನಟರಾಜ ಎಂದೆ ಖ್ಯಾತರಾದ ಶಶಿಕಾಂತ್ ಪಿ.ನಾಟಿಕರ್ ನಟಿಸಿ ನಿರ್ಮಿಸಿದ್ದು, ಸಹ ನಿರ್ದೇಶನ ಸಾಮ್ರಾಟ ಶ್ರೀನಿವಾಸ, ಎಸ್.ಸಿ. ಅಶೋಕ ಕಂಬ್ಳಿ, ಸಹಾಯಕ ನಿರ್ದೇಶನ ವಿತೇಶ ಮಂಜುನಾಥ ರಾಜ, ಅಜಯ ಎ.ಜೆ, ದುರ್ಗೇಶ(ರಾಯದುರ್ಗ), ಭರಣಿ, ಸುಮಂತ ಕಾಮತ, ಮಂಜುನಾಥ ಬಂಕಾಪೂರ ಅವರದ್ದಿದೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಬೆಂಗಳೂರು ಇವರಿಂದ 2024-25ನೇ ಸಾಲಿನಲ್ಲಿ ಗದಗ ಜಿಲ್ಲೆಯಲ್ಲಿ ಮಹಿಳಾ ತರಬೇತಿ ಯೋಜನೆಯಡಿ ಉಚಿತವಾಗಿ ಮಹಿಳೆಯರಿಗೆ ವಿವಿಧ ಕೌಶಲ್ಯಗಳಲ್ಲಿ ತರಬೇತಿ ನೀಡಲು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯಲ್ಲಿ ಮತ್ತು ಕೇಂದ್ರ ಸರಕಾರದ ಆಧೀನದಲ್ಲಿ ಆಕ್ರಿಡಿಟೇಷನ್ ಪಡೆದಿರುವ ಸಂಸ್ಥೆಗಳಾದ ಶ್ರೀ ಕಾಳಿದಾಸ ಶಿಕ್ಷಣ ಸಮಿತಿ ಗದಗ ಶ್ರೀ ದೇವರಾಜು ಅರಸು ವಸತಿ ನಿಲಯ ಶ್ರೀ ಬಯಲು ಆಂಜನೇಯ ದೇವಸ್ಥಾನದ ಹತ್ತಿರ, ಕಳಸಾಪುರ ರೋಡ್, ಗದಗ ಹಾಗೂ ಪಂಚಮಿ ಮಹಿಳಾ ಪಂಚಮಿ ಮಹಿಳಾ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ (ರಿ)ಎ ಹೆಚ್ ವಡವಡಗಿ ಬಿಲ್ಡಿಂಗ, ಕುರ್ಲಗೇರಿ ರೋಡ್, ಬಿ.ಎಸ್.ಎನ್.ಎಲ್ ಆಫೀಸ್ ಎದುರಿಗೆ ನರಗುಂದ ತಾ. ನರಗುಂದ ಈ ಸಂಸ್ಥೆಗಳಿಂದ ತರಬೇತಿ ಆಯೋಜಿಸಲಾಗುವುದು. ಪ್ರಸ್ತಾವನೆ ಸಲ್ಲಿಸಲು ಜೂನ್ 20 ಕೊನೆಯ ದಿನವಾಗಿರುತ್ತದೆ.

ಆಸಕ್ತರು ಮೇಲ್ಕಾಣಿಸಿದ ಸಂಸ್ಥೆಗಳನ್ನು ಸಂಪರ್ಕ ಮಾಡಿ ಏಚಿಣುಚಿಟಇಚಿಡಿ.ಛಿಂಟ ವೆಬ್ ಪೋರ್ಟಲ್‌ನಲ್ಲಿ ನಿಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನೌಷಧಿ ಕೇಂದ್ರವನ್ನು ಮುಚ್ಚಿಸಬಾರದು



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಮಂತ್ರಿ ಜನೌಷಧಿ ಕೇಂದ್ರವನ್ನು ಸರಕಾರಿ ಆಸ್ಪತ್ರೆ ಆವರಣದಿಂದ ತೆರವುಗೊಳಿಸಬೇಕೆಂದು ರಾಜ್ಯ ಸರಕಾರ ಆದೇಶ ಮಾಡಿದ್ದು ಖಂಡನೀಯ. ಜನೌಷಧಿ ಕೇಂದ್ರದಲ್ಲಿ ಬಡವರಿಗೆ ಕಡಿಮೆ ಬೆಲೆಗೆ ಉತ್ತಮ ಔಷಧಿ ದೊರೆಯುತ್ತಿದ್ದು, ಅದನ್ನು ಕಾಂಗ್ರೆಸ್ ಸರಕಾರ ಸಹಿಸಲಾಗದೇ ಈ ನಿರ್ಧಾರ ಕೈಗೊಂಡಿದೆ. ಸರಕಾರಿ ಆಸ್ಪತ್ರೆಯ ಆವರಣದಲ್ಲಿ ಇರುವ ಜನೌಷಧಿ ಕೇಂದ್ರವನ್ನು ಮುಚ್ಚಿಸಬಾರದು ಎಂದು ಹೊಳೆ ಆಲೂರು ಮಂಡಲ ಬಿಜೆಪಿ ಅಧ್ಯಕ್ಷ ಸೋಮಲಿಂಗಪ್ಪ ಬಿ.ಚರೇದ ರಾಜ್ಯ ಸರಕಾರದ ನೀತಿಯನ್ನು ಖಂಡಿಸಿದರು. ಹೊಳೆ ಆಲೂರ ಮಂಡಲದ ಬೆಳವಣಕಿ ಗ್ರಾಮದ ಪ್ರಾಥಮಿಕ ಅರೋಗ್ಯ ಕೇಂದ್ರದ ಎದುರು ಹಮ್ಮಿಕೊಂಡಿದ್ದ ಮೌನ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು. ಪ್ರತಿಭಟನೆಯಲ್ಲಿ ಮಂಡಲ ಯುವ ಮೋರ್ಚಾ ಅಧ್ಯಕ್ಷ ಶರಣು ಬರಶೆಟ್ಟಿ, ಎಸ್.ಸಿ ಮೋರ್ಚಾ ಅಧ್ಯಕ್ಷ ಚಂದ್ರಶೇಖರ ಮಾದರ, ಎಸ್.ಟಿ ಮೋರ್ಚಾ ಅಧ್ಯಕ್ಷ ಮಂಜುನಾಥ್ ಚುಳಕಿ, ಪ್ರಧಾನ ಕಾರ್ಯದರ್ಶಿಗಳಾದ ನೀಲಪ್ಪಗೌಡ ದಾನಪ್ಪಗೌಡರ, ಮುದಿಯಪ್ಪ ದಾನಿ, ಬೆಳವಣಕಿ ಗ್ರಾ.ಪಂ ಮಾಜಿ ಅಧ್ಯಕ್ಷ ಈರಪ್ಪ ತಾಳಿ, ಶಿವಪ್ಪ ಹಾಲಭಾವಿ, ಹಿರಿಯರಾದ ಸುಭಾಸ ಹೊಸಂಗಡಿ, ಶಿವು ಪೂಜಾರ, ಶರಣಪ್ಪ ಹದ್ಲಿ, ಅಂದಪ್ಪ ಹೊಸಂಗಡಿ, ಮಲ್ಲಾಪುರ ಗ್ರಾ.ಪಂ ಅಧ್ಯಕ್ಷ ಹಣಮಂತಗೌಡ ಹುಲ್ಲೂರ ಸೇರಿದಂತೆ ಬೆಳವಣಕಿ, ಮಲ್ಲಾಪುರ, ಸಂದಿಗವಾಡ, ಹೊನ್ನಾಪುರ ಗ್ರಾಮದ ಬಿಜೆಪಿ ಕಾರ್ಯಕರ್ತರು ಭಾಗವಹಿಸಿದ್ದರು.

### ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ಉದ್ಘಾಟನೆ, ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಎಸ್.ವಿ. ಸಂಕನೂರ

# ಹೆತ್ತವರ, ಶಿಕ್ಷಕರ, ಸಮಾಜದ ಋಣ ಮರೆಯದಿರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬರ ಮೇಲೂ ಸಮಾಜದ ಋಣ ಇರುತ್ತದೆ. ಹೀಗಾಗಿ ಹೆತ್ತವರ, ಶಿಕ್ಷಕರ, ಸಮಾಜದ ಋಣವನ್ನು ಮರೆಯಬಾರದು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಅವರು ನಗರದ ರೋಟರಿ ಸರ್ಕಲ್ ಹತ್ತಿರದ ಶ್ರೀ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಸಭಾಂಗಣದಲ್ಲಿ ರವಿವಾರ ಹಮ್ಮಿಕೊಂಡಿದ್ದ ಹೊಳೆಆಲೂರಿನ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆಯ ಉದ್ಘಾಟನೆ ನೆರವೇರಿಸಿ, ಬಳಿಕ ಸಂಸ್ಥೆಯಿಂದ ವಿವಿಧ ಕ್ಷೇತ್ರಗಳ ಸಾಧಕರಿಗೆ 'ಸಾಧಕ ರತ್ನ' ಪ್ರಶಸ್ತಿ ಪ್ರದಾನ ನೆರವೇರಿಸಿ, ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಪ್ರತಿಭಾವಂತರಿಗೆ 'ಕನ್ನಡ ಕುವರ-ಕುವರಿ' ರಾಜ್ಯ ಪ್ರಶಸ್ತಿ ಪ್ರದಾನ ನೆರವೇರಿಸಿ ಮಾತನಾಡಿದರು.

ಸಾಹಿತಿ, ಶಿಕ್ಷಕರಾಗಿರುವ ಹೊಳೆಆಲೂರಿನ ಎಸ್.ಕೆ. ಆಡಿನ ಮತ್ತಷ್ಟು ಸಮಾಜ ಸೇವೆ ಮಾಡುವ ಉದ್ದೇಶದಿಂದ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆಯನ್ನು ಆರಂಭಿಸಿರುವುದು ಅಭಿನಂದನೀಯ. ಸಂಸ್ಥೆಗಳನ್ನು ಆರಂಭಿಸುವುದರ ಜೊತೆಗೆ ಸಮಾಜಕ್ಕೆ ನೀಡುವ ಕೆಲಸಗಳ ಬಗ್ಗೆ ಮುಂದಿನ ವರ್ಷದ ಕ್ರಿಯಾಯೋಜನೆಯನ್ನು ಸಹ ತಯಾರಿಸಿಕೊಳ್ಳಬೇಕು. ಸಂಸ್ಥೆಯು ಶೈಕ್ಷಣಿಕವಾಗಿ, ಸಾಂಸ್ಕೃತಿಕವಾಗಿ ಬೆಳೆಯಬೇಕು. ಆ ಮೂಲಕ ಸಮಾಜಕ್ಕೆ ಇನ್ನಷ್ಟು ಕೊಡುಗೆ ನೀಡಲಿ ಎಂದು ಆಶಿಸಿದರು.

ಕಸಾಪ ಕಾರವಾರ ಜಿಲ್ಲಾ ಕಾರ್ಯದರ್ಶಿ ಗಣೇಶ ಬಿಷ್ಟಣ್ಣವರ ಮಾತನಾಡಿ, ಶ್ರದ್ಧೆ ಮತ್ತು ಧರ್ಮದಿಂದ ನಡೆಯುವುದನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಜೀವನದಲ್ಲಿ ಸಾಧನೆ ನಿಶ್ಚಿತ ಎಂದು ಹೇಳಿದರು. ಭೈರನಹಟ್ಟಿ ದೊರೆಸ್ವಾಮಿಮಠದ ಶ್ರೀ ಶಾಂತಲಿಂಗ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ ಅಧ್ಯಕ್ಷೆ ಶೋಭಾ ಎಸ್.ಆಡಿನ ಅವರು ಅಧ್ಯಕ್ಷತೆ ವಹಿಸಿದ್ದರು. ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡವಿನಮನಿ, ಅಶ್ವಿನಿ ಪ್ರಕಾಶನದ ಅಧ್ಯಕ್ಷೆ ವಿ.ವಿ. ಹಿರೇಮಠ, ಮುಂಡರಗಿಯ ನಿರ್ಮಲಾ ವಿವಿಧೋದ್ದೇಶ ಸಂಸ್ಥೆ ಸಂಸ್ಥಾಪಕ ಅಧ್ಯಕ್ಷೆ ನಿರ್ಮಲಾ ತೆರೆವಾಡೆ, ಗೋಟಗೋಡಿ ಜಾನಪದ ವಿವಿಯ ಸಹಪ್ರಾಧ್ಯಾಪಕ ಡಾ. ಪ್ರವೀಣ ಕರೆಯಪ್ಪಣ್ಣವರ, ಹೊಳೆಆಲೂರಿನ ಎಸ್‌ವೈವಿಎಸ್‌ನ ಸಹ ಕಾರ್ಯದರ್ಶಿ ವಿ.ಎಂ. ವಸ್ತ್ರದ, ವಿಶೇಷ ಆಹ್ವಾನಿತರಾಗಿ ಈರಣ್ಣ ಮಾದರ, ಬಸವರಾಜ ನೆಲಜರಿ, ಮರುಳಸಿದ್ದಪ್ಪ ದೊಡ್ಡಮನಿ, ಗವಿಸಿದ್ದಯ್ಯ ಹಳ್ಳಿಕೇರಿಮಠ, ಬಸವರಾಜ ಕೊರ್ಲಳ್ಳಿ, ಸುನೀಲ ನಾ.ಯಲಿಗಾರ ಮುಂತಾದವರು ವೇದಿಕೆಯಲ್ಲಿದ್ದರು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಪಾಂಡುರಂಗ ವಿ.ಪತ್ತಾರ, ಅಂಬಕ್ಕ ಚಿತ್ರಗಾರ, ಕೃಷಿಕ ಮಲ್ಲಯ್ಯ ಗುರುಬಸಣ್ಣವರ, ಪತ್ರಕರ್ತ ಭೀಮನಗೌಡ ಪಾಟೀಲ, ರಾಜು ಹೆಬ್ಬಳ್ಳಿ, ಎ.ಬಿ. ಗುಳಣ್ಣವರ, ವೀರೇಶ ಕಮ್ಮಾರ, ಕೆ.ವಾಯ್. ರಾಮಕೃಷ್ಣ, ಟಿ.ಎ. ಶಿರೋಳ, ಹನಮಂತ ಚಿತ್ರಗಾರ, ಮಹಾಂತೇಶ ಮಲ್ಲಾರಿ ಹಾಗೂ ಪ್ರಶಾಂತ ವಾಲ್ಮೀಕಿ ಅವರಿಗೆ ವಿಶೇಷ ಸನ್ಮಾನ ಮಾಡಿ ಗೌರವಿಸಲಾಯಿತು. ಕಾರ್ಯಕ್ರಮದ ಸಂಚಾಲಕರು ಹಾಗೂ ಶಿಕ್ಷಕ-ಸಾಹಿತಿ ಎಸ್.ಕೆ. ಆಡಿನ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಉಷಾ ಉಡತೆ ಅವರು ಕಾರ್ಯಕ್ರಮ ನಿರೂಪಿಸಿದರು.



ಕಸಾಪ ಗದಗ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಶಿಕ್ಷರಾಗಿರುವ ಎಸ್.ಕೆ. ಆಡಿನ ಅವರು ಸಾಹಿತ್ತಿಕವಾಗಿಯೂ ಆಸಕ್ತಿ ಹೊಂದಿದ್ದಾರೆ. ಈ ಉದ್ದೇಶ ಇಟ್ಟುಕೊಂಡು ಸ್ಥಾಪಿಸಿರುವ ಸಂಸ್ಥೆ ಸಮಾಜದಲ್ಲಿ ಎಲೆ ಮರೆಕಾಯಿಯಂತೆ ಇರುವ ಸಾಧಕರನ್ನು ಗುರುತಿಸಿ, ಸಮಾಜಕ್ಕೆ ಪರಿಚಯಿಸುವ ಕೆಲಸ ನಿರಂತರವಾಗಿರಲಿ ಎಂದು ಹೇಳಿದರು.

ಸಂಸ್ಥೆಯ ಲೋಗೋ ಬಿಡುಗಡೆ ಮಾಡಿದ ಶ್ರೀ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಈ ಸಂಸ್ಥೆಯು ಸಮಾಜಮುಖಿ ಕಾರ್ಯಗಳ ಮೂಲಕವೇ ಸಮಾಜಕ್ಕೆ ತೆರೆದುಕೊಂಡಿದೆ. ಸಾಧಕರಿಗೆ ಸನ್ಮಾನ, ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಪ್ರತಿಭಾವಂತರಿಗೆ ಪುರಸ್ಕಾರ, ಕವಿಗೋಷ್ಠಿ ಆಯೋಜಿಸುವ ಮೂಲಕ ಸಂಸ್ಥೆಯು ಉತ್ತಮ ಆರಂಭ ಮಾಡಿದೆ. ಆಡಿನ ಕುಟುಂಬದ ಮೂಲ ಹಾಗೂ ನನ್ನೂರು ಮಾಲಗಿತ್ತಿ. ಅಂತಹ ಊರಿನಿಂದ ಬಂದು, ಇದೀಗ ಒಂದು ಸಂಸ್ಥೆಯನ್ನು ಸ್ಥಾಪಿಸಿರುವುದು ಹೆಮ್ಮೆಯ ವಿಷಯ ಎಂದ ಅವರು, ಮಾಲಗಿತ್ತಿಗೆ ಲಿಂ.ತೋಂಟದ ಸಿದ್ಧಲಿಂಗ ಶ್ರೀಗಳು ಮಾಡಿದ ಉಪಕಾರವನ್ನೂ ಸ್ಮರಿಸಿದರು.

# ಡಿಪ್ಲೊಮಾ ಪ್ರವೇಶದ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ 02 ವರ್ಷಗಳ ಐ.ಟಿ.ಐ., ದ್ವಿತೀಯ ಪಿ.ಯು.ಸಿ.(ವಿಜ್ಞಾನ) ತಾಂತ್ರಿಕ ವಿಷಯಗಳಲ್ಲಿ ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ 3ನೇ ಸೆಮಿಸ್ಟರ್ ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಿಲಾಗಿದೆ.

2025-26ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನರಸಾಪೂರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಖಾಲಿ ಉಳಿದಿರುವ ಡಿಪ್ಲೊಮಾ ಕೋರ್ಸ್ ಸೀಟುಗಳಿಗೆ ಪ್ರಾಂಶುಪಾಲರ ಹಂತದಲ್ಲಿ, ಆಫ್-ಲೈನ್ ಮೂಲಕ ಡಿಪ್ಲೊಮಾ ಪ್ರವೇಶ ಪಡೆಯಲು ದಿನಾಂಕ: 30-06-2025 ರವರೆಗೆ ದಿನಾಂಕವನ್ನು ವಿಸ್ತರಿಸಲಾಗಿದೆ.

2025-26ನೇ ಸಾಲಿನ 02 ವರ್ಷಗಳ ಐ.ಟಿ.ಐ.ದ್ವಿತೀಯ ಪಿ.ಯು.ಸಿ.(ವಿಜ್ಞಾನ) ತಾಂತ್ರಿಕ ವಿಷಯಗಳಲ್ಲಿ ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ/3ನೇ ಸೆಮಿಸ್ಟರ್ ಡಿಪ್ಲೊಮಾ ಕೋರ್ಸ್ ಗಳಿಗೆ ಆಫ್‌ಲೈನ್ ಮೂಲಕ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶ ಬಯಸುವ ಅರ್ಹ ಅಭ್ಯರ್ಥಿಗಳು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ dtetech.karnataka.gov.in/kartechnical ಅಥವಾ dtek.karnataka.gov.in ಗಳಲ್ಲಿ ಅರ್ಜಿ ನಮೂನೆ ಮತ್ತು ಇ-ಮಾಹಿತಿ ಪುಸ್ತಕವನ್ನು ಡೌನ್‌ಲೋಡ್ ಮಾಡಿಕೊಂಡು, ಅರ್ಜಿಯನ್ನು ಇ-ಮಾಹಿತಿ ಪುಸ್ತಕದಲ್ಲಿರುವ ಸೂಚನೆಗಳನ್ವಯ ಸಂಪೂರ್ಣ ಭರ್ತಿ ಮಾಡಿಕೊಂಡು ಅವಶ್ಯವಿರುವ ಎಲ್ಲ ಮೂಲ ದಾಖಲಾತಿಗಳೊಂದಿಗೆ ಖುದ್ದಾಗಿ ಸಂಸ್ಥೆಗೆ ದಿನಾಂಕ: 14-06-2025 ಸಂಜೆ 05.30ರ ಒಳಗಾಗಿ ಬಂದು ಅರ್ಜಿಯನ್ನು ಸಲ್ಲಿಸಿ, ದಿನಾಂಕ: 17-06-2025 ರಂದು ಮೆರಿಟ್/ರೋಸ್ಟರ್ ಪ್ರಕಾರ ಸೀಟು ಆಯ್ಕೆಯಾದ ಅಭ್ಯರ್ಥಿಗಳು ಅಂದೇ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಯನ್ನು ಕಾಲೇಜಿನ ಕಚೇರಿ ಅವಧಿಯಲ್ಲಿ ಪಡೆಯಬಹುದಾಗಿದೆ.

# ಸಹಾಯಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ನರಗುಂದ ತಾಲೂಕಿನ ತೋಟಗಾರಿಕೆ ಬೆಳೆಗಾರರಿಗೆ 2025-26ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಗಳಡಿ ಸಹಾಯಧನ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆಗೆ ಜೂನ್ 20 ಕೊನೆಯ ದಿನವಾಗಿದೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ತೋಟಗಾರಿಕೆ ಬೆಳೆಗಳ ಹೊಸ ಪ್ರದೇಶ ವಿಸ್ತರಣೆ (ಹಣ್ಣು, ತರಕಾರಿ & ಹೂವು) ವೈಯಕ್ತಿಕ ನೀರು ಸಂಗ್ರಹಣಾ ಘಟಕಗಳು, ಮಿನಿ ಟ್ರ್ಯಾಕ್ಟರ್ (20 ಎಚ್.ಪಿ ಕಿಂತ ಕಡಿಮೆ ಸಾಮರ್ಥ್ಯ) ಗೆ ಸಹಾಯಧನ ಲಭ್ಯವಿರುತ್ತದೆ.

ರಾಷ್ಟ್ರೀಯ ಕೃಷಿ ವಿಸ್ತರಣೆ & ತಂತ್ರಜ್ಞಾನ ಅಭಿಯಾನ ಯೋಜನೆಯಡಿ ಕೃಷಿ ಯಾಂತ್ರೀಕರಣ ಉಪ ಅಭಿಯಾನ ತೋಟಗಾರಿಕೆಯಲ್ಲಿ ಯಾಂತ್ರೀಕರಣ ಕಾರ್ಯಕ್ರಮದಡಿ ಕೃಷಿ ಯಂತ್ರೋಪಕರಣಗಳ ಖರೀದಿಗೆ ಪ.ಜಾತಿ, ಪ.ಪಂಗಡ, ಸಣ್ಣ, ಅತಿ ಸಣ್ಣ ಮತ್ತು ರೈತ ಮಹಿಳೆಯರಿಗೆ ಶೇ.50% ರಷ್ಟು ಮತ್ತು ದೊಡ್ಡ ರೈತರಿಗೆ ಶೇ.40% ರಷ್ಟು ಸಹಾಯಧನ ನೀಡಲಾಗುವುದು. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಅಳವಡಿಸಿಕೊಳ್ಳಲು ಗರಿಷ್ಠ 2 ಹೆಕ್ಟರ್ ವರೆಗೆ ಶೇ.90% ರಷ್ಟು ಎಲ್ಲಾ ರೈತರಿಗೆ ಸಹಾಯಧನ ನೀಡಲಾಗುವುದು. ಆಸಕ್ತ ತೋಟಗಾರಿಕೆ ರೈತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ನರಗುಂದ ಕಚೇರಿಗೆ ಸಂಪರ್ಕಿಸಬಹುದಾಗಿದೆ.

### ಸಾವಿರಾರು ಭಕ್ತರ ಸಮ್ಮುಖದಲ್ಲಿ ಸುಗಮವಾಗಿ ಸಾಗಿದ ಟೋಪ ಜಾತ್ರೆ

# ಸಂಭ್ರಮದ ಟೋಪ ಜಾತ್ರೆ ಆರಂಭ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಹಳೆಹುಡ ಓಣಿಯಲ್ಲಿ ನೆಲೆಸಿದ ಗ್ರಾಮ ದೇವತೆಗಳ ಟೋಪ ಜಾತ್ರಾ ಮಹೋತ್ಸವ ಮಂಗಳವಾರ ಸಕಲ ವಾದ್ಯ ವೈಭವಗಳೊಂದಿಗೆ ಸಂಭ್ರಮದಿಂದ ಪ್ರಾರಂಭಗೊಂಡಿತು. ಬೆಳಗಿನ ಜಾವ ಜಾತ್ರೆಯ ವಿಧಿ ವಿಧಾನದಂತೆ ಅಭಿಷೇಕ ಪೂಜೆ, ಹವನ ಹೋಮಗಳಿಂದ ಪ್ರಾರಂಭಗೊಂಡು, ಮೊದಲು ಮುದಿ ದುರ್ಗಮ್ಮನ ದೇವಸ್ಥಾನಕ್ಕೆ ಭೇಟಿ ನೀಡಿ ನಂತರ ಭಕ್ತರುಗಳ ಕಟ್ಟೆ (ಗ್ರಾಮದ ಪ್ರಮುಖರ ಮನೆ) ಮನೆಗಳಿಗೆ ಭೇಟಿ ನೀಡುತ್ತಾ ಮುಂದೆ ಸಾಗಿ ಗ್ರಾಮದ ನಿಯಮಿತ ಕಟ್ಟೆಗಳಿಗೆ ಹೋಗಿ ಉಡಿ ತುಂಬಿಸಿಕೊಳ್ಳುವ ಕಾರ್ಯ ನೆರವೇರಿಸಲಾಯಿತು.

ಈ ಗ್ರಾಮ ದೇವತೆ ಉತ್ಸವದಲ್ಲಿ ಮುಳಗುಂದ ಪಟ್ಟಣದ




ಭಕ್ತರು ಶ್ರದ್ಧಾ-ಭಕ್ತಿಯಿಂದ, ಸೌಹಾರ್ದತೆಯಿಂದ ಜಾತಿ, ಮತ, ಬೇಧವಿಲ್ಲದೆ ಸರ್ವ ಜನಾಂಗದವರೂ ಭಾಗವಹಿಸುವುದು ವಿಶೇಶವಾಗಿದೆ. ಯಾವದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡದಂತೆ ಮೆರವಣಿಗೆ ಸಾಗಿತು. ಇದರಲ್ಲಿ ರೈತರು, ಕಾರ್ಮಿಕರು, ಎಲ್ಲ ನೌಕರರು ಪಟ್ಟಣಕ್ಕೆ ಆಗಮಿಸಿ ಭಾಗವಹಿಸಿದ್ದು ಜಾತ್ರೆಗೆ ಮೆರಗು ತಂದಿತು.

ಗ್ರಾಮದೇವತೆ ಟೋಪ ಜಾತ್ರೆಯಲ್ಲಿ ಮಕ್ಕಳು ಸಾರ್ವಜನಿಕರು, ಮಹಿಳೆಯರ ಮನರಂಜನೆಗಾಗಿ ಪಟ್ಟಣದ ಬಸ್ ನಿಲ್ದಾಣದ ಹತ್ತಿರವಿರುವ ಬಯಲು ಜಾಗೆಯಲ್ಲಿ ವಿವಿಧ ಆಟೋಟಗಳ ವ್ಯವಸ್ಥೆಯನ್ನು ವಿಶೇಷ ದರದಲ್ಲಿ ಆಯೋಜನೆ ಮಾಡಲಾಗಿದೆ. ಭಕ್ತಾದಿಗಳು ಜೋಕಾಲಿ ಜೀಕಿ ಖುಷಿ ಪಟ್ಟರು.

ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಬಡ್ನಿಯವರ ಕುಟುಂಬದಿಂದ, ಆಂಗ್ಲೋ ಉರ್ದು ಸ್ಕೂಲ್ ಮುಳಗುಂದದಲ್ಲಿ ನೀಲಗುಂದ ಕುಟುಂಬದವರಿಂದ, ಬಂಡಿಯವರ ಓಣಿಯಲ್ಲಿ ಆರ್.ಸಿ. ಕಮಾಜಿ ಸಹೋದರರಿಂದ ಪ್ರಸಾದ ಸೇವೆಗೆ ಆಯೋಜನೆ ಮಾಡಲಾಗಿದೆ. ಅಲ್ಲದೇ ಇತರ ಕಟ್ಟೆಗಳಿಗೆ ದೇವಿ ಭೇಟಿ ನೀಡುವ ಸ್ಥಳಗಳಲ್ಲಿ ಅಲ್ಪೋಪಹಾರದ ವ್ಯವಸ್ಥೆ ಮಾಡಲಾಗಿದೆ. ಜಾತ್ರೆಯ ಮೆರವಣಿಗೆ ನೋಡಲು ಬಂದ ಭಕ್ತರು ಸ್ವಯಂ ಪ್ರೇರಿತರಾಗಿ ಪಾದರಕ್ಷೆಗಳನ್ನು ಮನೆಯಲ್ಲಿಯೇ ಬಿಟ್ಟು ಭಾವಹಿಸಿದ್ದು ಗಮನ ಸೆಳೆಯುವಂತಿತ್ತು. ಅಲ್ಲದೇ ಮುಸ್ಲಿಂ ಬಾಂಧವರು ಕೂಡಾ ಮನೆಗಳಲ್ಲಿ ಮಾಂಸಾಹಾರ ಸೇವನೆ ಮಾಡದೇ ಸಾಮೂಹಿಕವಾಗಿ ಸಿಹಿ ಭೋಜನವನ್ನು ಸವಿದರು.

ಜಾತ್ರೆಯ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಪೊಲೀಸ್ ಇಲಾಖೆ ಬಿಗಿ ಬಂದೋಬಸ್ತ್ ಕೈಗೊಂಡಿದ್ದರೂ ಕೆಲವು ಸಂದಿಗೊಂದಿಗಳಲ್ಲಿ ಬೈಕ್ ಸವಾರರು ಬೈಕ್‌ಗಳನ್ನೇರಿ ಮೆರವಣಿಗೆ ಭಾಗದಲ್ಲಿ ಕ್ಕಿದ್ದನ್ನು ಹೊರತುಪಡಿಸಿದರೆ ಯಾವದೇ ಅಹಿತಕರ ಘಟನೆಗೆ ಎಲ್ಲಿಯೂ ಅವಕಾಶವಿರಲಿಲ್ಲ.

> ಉತ್ಸವ ಉತ್ತಮ ರೀತಿಯಲ್ಲಿ ಸಾಗಿದ್ದು, ಎಲ್ಲಿಯೂ ಯಾವದೇ ರೀತಿಯಿಂದ ತೊಂದರೆಯಾಗದಂತೆ ಸಾಗುತ್ತಿದೆ. ಪ್ರಸಾದ ಸೇವೆಯೂ ಸುಗಮವಾಗಿ ನೆರವೇರಿದೆ. ಎಲ್ಲ ಕಾರ್ಯಕ್ರಮಗಳು ಯಾವುದೇ ಕೊರತೆಯಾಗದಂತೆ ನಡೆದಿದೆ. ಆದರೆ ಬೈಕ್ ಸವಾರರಿಂದ ಭಕ್ತಾದಿಗಳಿಗೆ ಕಿರಿಕಿರಿ ಆಗುತ್ತಿದೆ. ನಾಳೆ ಹೆಚ್ಚಿನ ಬಂದೋಬಸ್ತ್ ಒದಗಿಸಲು ಇಲಾಖೆಗೆ ಸೂಚಿಸಲಾಗಿದೆ.
>
> **– ಎಸ್.ಎಂ. ನೀಲಗುಂದ.**
> ಜಾತ್ರಾ ಕಮಿಟಿ ಗೌರವಾಧ್ಯಕ್ಷರು.

# ಪ್ರತಿಭಾ ಪುರಸ್ಕಾರ, ನಿವೃತ್ತರಿಗೆ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಹಾತಲಗೇರಿ ರಸ್ತೆಯ ವಿವೇಕಾನಂದ ನಗರದ ಗಾಣಿಗ ಸಮುದಾಯ ಭವನದಲ್ಲಿ ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ ವತಿಯಿಂದ 2024-25ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 85ಕ್ಕಿಂತ ಹೆಚ್ಚು ಅಂಕ ಗಳಿಸಿದ ಜಿಲ್ಲೆಯ ಗಾಣಿಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, 2024-25ನೇ ಸಾಲಿನಲ್ಲಿ ನಿವೃತ್ತರಾದ ಗಾಣಿಗ ಸಮಾಜದ ಸರ್ಕಾರಿ



ನೌಕರರಿಗೆ ಸನ್ಮಾನ ಹಾಗೂ ವಾರ್ಷಿಕ ಸಭೆಯು ಜೂ. 15ರಂದು ಬೆಳಿಗ್ಗೆ 10.30ಕ್ಕೆ ಜರುಗಲಿದೆ. ಅರ್ಹ ವಿದ್ಯಾರ್ಥಿಗಳು ಅಂಕಪಟ್ಟಿಯ ನಕಲು ಪ್ರತಿ, ಪಾಸ್‌ಪೋರ್ಟ್ ಸೈಜಿನ ಭಾವಚಿತ್ರದೊಂದಿಗೆ ಹಾಗೂ ನಿವೃತ್ತ ನೌಕರರು ಜೂ. 8ರೊಳಗಾಗಿ ವಿವೇಕಾನಂದ ನಗರದ ಗಾಣಿಗ ಭವನ ಕಾರ್ಯಾಲಯ ಹಾಗೂ ಲಕ್ಕುಂಡಿ ಸ್ಟೀಲ್ ಕಾಟನ್ ಮಾರ್ಕೆಟ್ ರಸ್ತೆ ಗದಗ, ಎಂ.ಬಿ. ಬಡ್ನಿ ಮತ್ತು ಕಂ, ಎಪಿಎಂಸಿ ಯಾರ್ಡ್‌ದಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಮಾಹಿತಿಗಾಗಿ ಮೊಬೈಲ್ ಸಂಖ್ಯೆ-9448142509, 9945037111, 7795826957, 8970592837 ಸಂಪರ್ಕಿಸಬಹುದು ಎಂದು ಟ್ರಸ್ಟ್‌ನ ಅಧ್ಯಕ್ಷ ಬಸವರಾಜ ಬಿಂಗಿ, ಕಾರ್ಯದರ್ಶಿ ಎಂ.ಬಿ. ಬಡ್ನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುಲಾಬಿ, ಸಿಹಿ ನೀಡಿ ವಿದ್ಯಾರ್ಥಿಗಳಿಗೆ ಸ್ವಾಗತ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಅರುಣೋದಯ ವಿಶೇಷ ಮಕ್ಕಳ ಶಾಲೆಯ ಶೈಕ್ಷಣಿಕ ವರ್ಷಾರಂಭಕ್ಕೆ ವಿದ್ಯಾರ್ಥಿಗಳಿಗೆ ಗುಲಾಬಿ ಹೂ ಕೊಟ್ಟು, ಸಿಹಿ ವಿತರಿಸುವ ಮೂಲಕ ಸೋಮವಾರ ಬರಮಾಡಿಕೊಳ್ಳಲಾಯಿತು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಗಾಯತ್ರಿ ಕೃಷ್ಣರಾಜ ಹೆಬಸೂರ ವಿಶೇಷ ಮಕ್ಕಳಿಗೆ ಆರತಿ ಮಾಡಿ ಶಾಲೆಗೆ ಬರಮಾಡಿಕೊಂಡರು. ವಿಶೇಷ ಚೇತನ ಮಕ್ಕಳು ವಿಶೇಷವಾಗಿದ್ದು, ಅವರನ್ನು ಪ್ರೀತಿ-ಸ್ನೇಹದಿಂದ ನೋಡಿಕೊಳ್ಳುವ ಕಾರ್ಯ ಪಾಲಕರಿಂದ, ಶಿಕ್ಷಕ ಬಳಗದಿಂದ ಆಗಬೇಕು. ವಿಶೇಷ ಮಕ್ಕಳ ಬುದ್ಧಿಮಟ್ಟಕ್ಕೆ ಅನುಗುಣವಾಗಿ ಶಿಕ್ಷಣ ನೀಡಿದಲ್ಲಿ ಅವರು ತಮ್ಮ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಿಕೊಂಡು ಬರಲಿರುವ ದಿನಗಳಲ್ಲಿ ಉನ್ನತ ಶಿಕ್ಷಣ ಪಡೆದಲ್ಲಿ ಅವರಿಗೆ ಸರಕಾರದಿಂದ ಸಾಕಷ್ಟು ಸೌಲಭ್ಯಗಳಿವೆ ಎಂದರು.

ಶಾಲೆಯ ಆಡಳಿತ ಮಂಡಳಿಯ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ ಮಾತನಾಡಿ, ಹುಬ್ಬಳ್ಳಿಯ ಸೇವಾ ಟ್ರಸ್ಟ್‌ನ ಅರುಣೋದಯ ವಿಶೇಷ ಮಕ್ಕಳ ಶಾಲೆಯು ಬಹು ವರ್ಷಗಳಿಂದ ವಿಶೇಷ ಮಕ್ಕಳ ಸೇವೆಗೆ ತನ್ನನ್ನು ಸಮರ್ಪಿಸಿಕೊಂಡಿದೆ. ಇಲ್ಲಿ ವ್ಯಾಸಂಗ ಮಾಡಿದ ಹಳೇ ವಿದ್ಯಾರ್ಥಿಗಳು ಇಂದು ಉನ್ನತ ಶಿಕ್ಷಣ ಪಡೆದು ಉನ್ನತ ಹುದ್ದೆಯಲ್ಲಿದ್ದಾರೆ ಎಂದರು.

ಕಾರ್ಯದರ್ಶಿ ಜಯರಾಜ ಮುಳಗುಂದ ಮಾತನಾಡಿ, ವಿಶೇಷ ಮಕ್ಕಳ ಶ್ರೇಯೋಭಿವೃದ್ಧಿಗೆ ಇಲ್ಲಿ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಅನುಭವಿಕ ಶಿಕ್ಷಕ ಬಳಗ ಮಕ್ಕಳ ಬಗ್ಗೆ ಕಾಳಜಿ ವಹಿಸುವರು ಎಂದರು.

ಶಾಲಾ ಮುಖ್ಯೋಪಾಧ್ಯಾಯ ಮಲ್ಲಪ್ಪ ಹಕ್ಕಿ ಸ್ವಾಗತಿಸಿದರು, ಸದಸ್ಯರಾದ ಬಸವರಾಜ ಪಟ್ಟಣಶೆಟ್ಟಿ ನಿರೂಪಿಸಿದರು. ಕಟ್ಟಡ ನಿರ್ವಾಹಕ ಮಲ್ಲಿಕಾರ್ಜುನ ನಾಗಲಾಪೂರ ವಂದಿಸಿದರು.

### ಶಿವಾನುಭವಗೋಷ್ಠಿಯಲ್ಲಿ ಡಾ. ರಮೇಶ ಕಲ್ಲನಗೌಡರ ಅಭಿಮತ

# ಬುದ್ಧ ಎಂದರೆ ಅರಿವು, ಜ್ಞಾನ, ಬೆಳಕು

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬುದ್ಧ ಎಂದರೆ ಅದೊಂದು ಅರಿವು, ಜ್ಞಾನ, ಬೆಳಕು. ತನ್ನಲ್ಲಿ ಯಾರು ಈ ಮೂರನ್ನು ಹೊಂದಿರುತ್ತಾನೆಯೋ ಅವನೇ ಬುದ್ಧನಾಗುತ್ತಾನೆ. ಸಿದ್ಧಾರ್ಥ ಬುದ್ಧನಾದುದು ಹೀಗೆಯೇ ಎಂದು ಪ್ರಾಧ್ಯಾಪಕ ಡಾ. ರಮೇಶ ಕಲ್ಲನಗೌಡ್ರ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ನಡೆದ ಶಿವಾನುಭವಗೋಷ್ಠಿ-62ರಲ್ಲಿ ಬುದ್ಧನ ಜೀವನ ಚರಿತ್ರೆ ಕುರಿತು ಅವರು ಮಾತನಾಡಿದರು. ಆಸೆಯೇ ದುಃಖಕ್ಕೆ ಮೂಲ ಕಾರಣ ಎಂಬುದು ಬುದ್ಧನ ಮೂಲ ಮಂತ್ರವಾಗಿದೆ. ಆಸೆಯ ಆಳವನ್ನು ಅರಿತಾಗ ನಮಗೆ ದುಃಖವೆಂದರೇನೆಂಬುದು ಅರ್ಥವಾಗುತ್ತದೆ. ಸಿದ್ಧಾರ್ಥನಿಗೆ



ಈ ಅರಿವು ಆಗಿದ್ದರಿಂದಲೆ ಆತ ಎಲ್ಲವನ್ನೂ ತೊರೆದು ಮಧ್ಯರಾತ್ರಿ ಮನೆ ಬಿಟ್ಟು ಹೋಗಿ ಬುದ್ಧನಾದ. ಬುದ್ಧತ್ವದ ಭಾವವನ್ನು ನಮ್ಮಲ್ಲಿ ಅಳವಡಿಸಿಕೊಂಡಾಗ ಮಾತ್ರ ನಮಗೆ ಜೀವನದ ನಿಜವೇನೆಂಬುದು ಅರ್ಥವಾಗುತ್ತದೆ.

ಆದರೆ ಇದು ಎಲ್ಲರಿಗೂ ಸಾಧ್ಯವಾಗುವದಲ್ಲ ಎಂದರು. ನಾವು ಪ್ರತಿ ದಿನ, ಪ್ರತಿ ಕ್ಷಣ ಸುಖವನ್ನು ಬಯಸುತ್ತೇವೆ ಹೊರತು ದುಃಖವನ್ನಲ್ಲ. ಒಬ್ಬೊಬ್ಬರ ಸುಖದ ಕಲ್ಪನೆ ಒಂದೊಂದು ರೀತಿಯದ್ದಾಗಿರುತ್ತದೆ. ಇದಕ್ಕೆ ಕಾರಣ ನಮ್ಮ ಮನಸ್ಸು ಮತ್ತು ಬುದ್ಧಿ. ಹೃದಯ ಮತ್ತು ಮೆದುಳು ದೇಹದ ಎರಡು ಮಹತ್ವದ ಅಂಗಗಳು. ಈ ಅಂಗಗಳ ಸಮರ್ಪಕ ಕಾರ್ಯ ನಿರ್ವಹಣೆಯಿಂದ ನಮ್ಮ ವ್ಯಕ್ತಿತ್ವ ನಿರ್ಮಾಣವಾಗುತ್ತದೆ. ಇವೆರಡರ ಆಲಿಂಗನವೇ ಸಾಹಿತ್ಯವಾಗಿದೆ. ಮನುಷ್ಯ ತನ್ನನ್ನು ತಾನು ಪರೀಕ್ಷೆಗೆ ಒಡ್ಡಿಕೊಂಡಾಗ ಆತನಿಗೆ ತನ್ನ ಶಕ್ತಿ ಏನೆಂಬುದು ತಿಳಿಯುತ್ತದೆ. ನಮ್ಮ ಪರಿಮಿತಿಯೊಳಗೆ ನಾವು ಬದುಕಬೇಕು. ಅಂದಾಗ ಮಾತ್ರ ನಮ್ಮ ಜೀವನ ಸುಖಮಯವಾಗಿರುತ್ತದೆ ಎಂದು ಹೇಳಿದರು. ನಿವೃತ್ತ ಪ್ರಾಚಾರ್ಯ ಸಿ.ಐ. ಮರಡಿಮಠ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ವೇದಿಕೆಯ ಮೇಲಿದ್ದರು. ಆಡಳಿತಾಧಿಕಾರಿ ಎನ್. ಆರ್. ಗೌಡರ, ಡಾ. ಎಸ್.ಎ. ಪಾಟೀಲ, ಡಾ. ಎಲ್.ಎಸ್. ಗೌರಿ, ರಾಚಯ್ಯ ಮಠದ, ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ಉಪಸ್ಥಿತರಿದ್ದರು. ಉಪನ್ಯಾಸಕ ಎಫ್. ಎನ್. ಹುಡೇದ ಸ್ವಾಗತಿಸಿದರು. ಡಾ. ಕಲ್ಲಯ್ಯ ಹಿರೇಮಠ ನಿರೂಪಿಸಿದರು. ಹಾದಿಮನಿ ವಂದಿಸಿದರು.

# ರೇಷ್ಮೆ ಕೃಷಿ ಅಳವಡಿಕೆ; ರೈತ ಬಾಂಧವರಿಗೆ ಸಲಹೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಸ್ತುತ ಮಳೆ ಚೆನ್ನಾಗಿ ಆಗುತ್ತಿದ್ದು, ಹಿಪ್ಪುನೇರಳೆ ಕೃಷಿ ಕೈಗೊಳ್ಳಲು ಸಕಾಲವಾಗಿದೆ. ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ವೈಯುಕ್ತಿಕ ಕಾಮಗಾರಿಗಳನ್ನು ಕೈಗೊಂಡು ರೇಷ್ಮೆ ಕೃಷಿಯನ್ನು/ಹಿಪ್ಪು ನೇರಳೆ ಕೃಷಿಯನ್ನು ಅವಲಂಬಿಸಲು ಸೂಕ್ತ ಕಾಲವಾಗಿದೆ.

ರೇಷ್ಮೆ ಕೃಷಿ ಅವಲಂಬಿಸುವುದರಿಂದ ಸುಸ್ಥಿರ ಆರ್ಥಿಕ ಲಾಭವನ್ನು ಪಡೆಯಲು ಸಾಧ್ಯ. ಹೆಚ್ಚಿನ ಉದ್ಯೋಗ ಲಭ್ಯವಾಗುತ್ತಿದ್ದು, ಹೆಚ್ಚಿನ ಹಣಕಾಸಿನ ಲಾಭ ರೈತರಿಗೆ ದೊರಕುತ್ತದೆ. ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಈ ಕಾಮಗಾರಿಗಳನ್ನು ಕೈಗೊಳ್ಳಲು ರೇಷ್ಮೆ ಇಲಾಖೆ, ಜಿಲ್ಲಾ ಪಂಚಾಯತ್, ಗದಗ ಅವಕಾಶ ಕಲ್ಪಿಸಿದೆ.

ಹೊಸದಾಗಿ 2025-26ನೇ ಸಾಲಿನಲ್ಲಿ ಹೊಸದಾಗಿ ಹಿಪ್ಪು ನೇರಳೆ ತೋಟ ನಿರ್ಮಾಣ ಮಾಡಲು, ಹೊಸದಾಗಿ ಹಿಪ್ಪುನೇರಳೆ ಮರಗಡ್ಡಿ ತೋಟ ಬೆಳಸಲು, ಹೊಸದಾಗಿ ನರ್ಸರಿ ಸಸಿಗಳನ್ನು ಉತ್ಪಾದಿಸಲು ನರೇಗಾ ಯೋಜನೆಯಲ್ಲಿ ಅವಕಾಶವಿದೆ.

ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕಿನ ರೇಷ್ಮೆ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ರೇಷ್ಮೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಲ್ವಡಿ ಕೃಷ್ಣರಾಜ ಒಡೆಯರ ಜಯಂತಿ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರು ಹಾಗೂ ಮೈಸೂರು ಸಂಸ್ಥಾನದ ಜನಪರ ದೊರೆಯಾಗಿದ್ದ ರಾಜರ್ಷಿ ಕೃಷ್ಣರಾಜ ಒಡೆಯರ ಅವರ 141ನೇ ಜಯಂತ್ಯುತ್ಸವವನ್ನು ಕಸಾಪ ಕಾರ್ಯಾಲಯದ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನದಲ್ಲಿ ಜೂನ್ 4ರಂದು ಸಂಜೆ 6.30ಕ್ಕೆ ಆಯೋಜಿಸಲಾಗಿದೆ.



ನಾಲ್ವಡಿ ಕೃಷ್ಣರಾಜ ಒಡೆಯರ ಅವರ ಕೊಡುಗೆ ಕುರಿತು ಶಿರಹಟ್ಟಿಯ ಸರಕಾರಿ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಬಸವರಾಜ ಗಿರಿತಿಮ್ಮಣ್ಣವರ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಕೆ.ವಿ.ಎಸ್.ಆರ್. ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ವಿ.ಎಸ್. ದಲಾಲಿ ಭಾಗವಹಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು.

ಕಾರ್ಯಕ್ರಮದಲ್ಲಿ ಪರಿಷತ್ತಿನ ಎಲ್ಲ ಸದಸ್ಯರು, ಸಾಹಿತಿಗಳು, ಕನ್ನಡಾಭಿಮಾನಿಗಳು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ಕೋರಿದ್ದಾರೆ.

### ಸ್ಲಂ ನಿವಾಸಿಗಳಿಗೆ ಭೂಮಿ ಹಕ್ಕು ಖಾತ್ರಿಗೊಳಿಸಲು ಮುಖ್ಯಮಂತ್ರಿಗಳಿಗೆ ಮನವಿ

# ಸ್ಲಂ ನಿವಾಸಿಗಳಿಗೆ ನೀಡಿರುವ ಭರವಸೆ ಈಡೇರಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಹೊಸ ಭರವಸೆಯೊಂದಿಗೆ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಪಕ್ಷದ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜನಪರವಾದ 5 ಗ್ಯಾರಂಟಿಗಳನ್ನು ಈಡೇರಿಸುವ ಮೂಲಕ ಎಲ್ಲಾ ಬಡವರಿಗೆ, ಸ್ತ್ರೀಯರಿಗೆ, ಅಶಕ್ತ ಸಮುದಾಯಗಳಿಗೆ ರಾಜ್ಯದ ಸಂಪನ್ಮೂಲದಲ್ಲಿ ಹಂಚಿಕೆ ಮಾಡುವ ಮುಖಾಂತರ ಹೊಸ ಇತಿಹಾಸ ನಿರ್ಮಾಣ ಮಾಡುತ್ತಿದೆ. ಅಂತೆಯೇ, ರಾಜ್ಯ ಸರ್ಕಾರ ಘೋಷಿಸಿರುವ 6ನೇ ಗ್ಯಾರಂಟಿ ಯೋಜನೆಡಿಯ ಭೂಮಿ ಹಕ್ಕನ್ನು ರಾಜ್ಯದ ಸ್ಲಂ ನಿವಾಸಿಗಳಿಗೆ ಖಾತ್ರಿಗೊಳಿಸಬೇಕೆಂದು ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ನೀಡಿ ಒತ್ತಾಯಿಸಿದರು.

ಸಿಎಂ ಸಿದ್ದರಾಮಯ್ಯ ಮಂಗಳವಾರ ಲಕ್ಕುಂಡಿಗೆ ಆಗಮಿಸಿದ್ದ ಸಂದರ್ಭದಲ್ಲಿ ಮನವಿ ಸಲ್ಲಿಸಿದ



ಪದಾಧಿಕಾರಿಗಳು, ಚುನಾವಣಾ ಪೂರ್ವದಲ್ಲಿ ಸ್ಲಂ ನಿವಾಸಿಗಳಿಗೆ ನೀಡಿರುವ ಭರವಸೆಯನ್ನು ಈಡೇರಿಸಬೇಕು. ನಗರಾಭಿವೃದ್ಧಿ ಇಲಾಖೆಯ ಅಡಿಯಲ್ಲಿ ಸ್ಲಂ ಪ್ರದೇಶಗಳಿಗೆ ಶ್ರಮಿಕ ನಿವಾಸ ಪ್ರದೇಶ ಎನ್ನುವ ನಾಮಕರಣ ಮಾಡಿ ವಸತಿ ಯೋಜನೆ ಹಾಗೂ ಹಕ್ಕುಪತ್ರ ವಿತರಣೆ ಮಾಡುವ ಭರವಸೆ ನೀಡಲಾಗಿದೆ. ಹಾಗಾಗಿ ಇತರೆ ರಾಜ್ಯಗಳಲ್ಲಿರುವಂತೆ ನಗರಾಭಿವೃದ್ಧಿ ಭಾಗವಾಗಿರುವ ಕೊಳಚೆ ಪ್ರದೇಶಗಳ ಸರ್ವತೋಮುಖ ಅಭಿವೃದ್ಧಿಗೆ ಪ್ರತ್ಯೇಕ ಸಚಿವರು ಮತ್ತು ಇಲಾಖೆಯನ್ನು ರಚಿಸಬೇಕು.

ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ಹಲವು ವರ್ಷಗಳಿಂದ ವಸತಿಗಾಗಿ ನಿರಂತರವಾಗಿ ಹೋರಾಟ ನಡೆಸುತ್ತಿರುವ ಗದಗ-ಬೆಟಗೇರಿ ನಗರದ ವಸತಿರಹಿತ ಕುಟುಂಬಗಳಿಗೆ ಶೀಘ್ರವೇ ಮನೆಗಳನ್ನು ಹಂಚಿಕೆ ಮಾಡಬೇಕು, ಪ್ರಧಾನ ಮಂತ್ರಿಗಳ ಆವಾಸ್ ಯೋಜನೆಡಿಯಲ್ಲಿ ಗದಗ-ಬೆಟಗೇರಿ ನಗರಕ್ಕೆ ಮಂಜೂರು ಆಗಿರುವ 863 ಮನೆಗಳನ್ನು ಪೂರ್ಣವಾಗಿ ನಿರ್ಮಿಸದೇ ಹಾಗೂ ಅರ್ಹ ಸ್ಲಂ ಪ್ರದೇಶಗಳ ಕುಟುಂಬಗಳಿಗೆ ಮನೆಗಳನ್ನು ಮಂಜೂರು ಮಾಡದೇ ಸ್ಥಳೀಯ ಸ್ಲಂ ನಿವಾಸಿಗಳಿಗೆ ಅನ್ಯಾಯ ಮಾಡಲಾಗಿದ್ದು, ಸ್ಲಂ ಬೋರ್ಡ ಅಧಿಕಾರಿಗಳು ಸರ್ಕಾರದ ವಸತಿ ಯೋಜನೆಗೆ ನೈಜ್ ಫಲಾನುಭವಿಗಳನ್ನು ಆಯ್ಕೆ ಮಾಡದೇ ಸ್ಥಿತಿವಂತರಿಗೆ ಮನೆಗಳನ್ನು ನಿರ್ಮಾಣ ಮಾಡಿದ್ದರಿಂದ ಸಾಕಷ್ಟು ಭ್ರಷ್ಟಾಚಾರವನ್ನು ನಡೆಸಲಾಗಿದೆ. ಇದನ್ನು ಉನ್ನತ ಮಟ್ಟದ ತನಿಖೆ ನಡೆಸಬೇಕೆಂದು ಮನವಿ ಮುಖಾಂತರ ಆಗ್ರಹಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ, ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಮೆಹಬೂಬಸಾಬ ಬಳ್ಳಾರಿ, ರೇಷ್ಮಾ ಢಾಲಾಯತ, ಶರಣಪ್ಪ ಸೂಡಿ, ಖಾಜಾಸಾಬ ಇಸ್ಮಾಯಿಲನವರ, ಸಲೀಂ ಹರಿಹರ ಹಾಗೂ ಮುಂತಾದ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

> ಪ್ರಸ್ತುತ ವಸತಿ ರಹಿತ ಕುಟುಂಬಗಳ ಸಮೀಕ್ಷೆಯನ್ನು ಮಾಡಿ 'ನಗರ ಲ್ಯಾಂಡ್ ಬ್ಯಾಂಕ್' ಯೋಜನೆಯನ್ನು ಜಾರಿಗೊಳಿಸಿ ಮನೆ ಇಲ್ಲದ ಕುಟುಂಬಕ್ಕೊಂದು ಮನೆ ನೀಡಲು ರಾಜ್ಯದಲ್ಲಿ ವಸತಿ ಹಕ್ಕು ಕಾಯಿದೆಯನ್ನು ಜಾರಿಗೊಳಿಸಿ ಸರ್ಕಾರವೇ ಮನೆ ನಿರ್ಮಿಸಿಕೊಡಬೇಕು ಎಂದು ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

### ಕವಿ ಎಚ್.ಎಸ್. ವೆಂಕಟೇಶಮೂರ್ತಿ ಅವರಿಗೆ ನುಡಿ ನಮನ

# ಸಾಹಿತ್ಯ ಲೋಕಕ್ಕೆ ಎಚ್‌ಎಸ್‌ವ್ಹಿ ಕೊಡುಗೆ ಅಪಾರ



**■ವಿಜಯಸಾಕ್ಷಿ ಸುದ್ದಿ, ಗದಗ**

ನೂರಕ್ಕೂ ಹೆಚ್ಚು ವೈವಿಧ್ಯಮಯ ಕೃತಿಗಳ ಮೂಲಕ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದವರು ಎಚ್.ಎಸ್. ವೆಂಕಟೇಶಮೂರ್ತಿ. ಕನ್ನಡ ಸಾಹಿತ್ಯ ಲೋಕದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ ಇವರು ತಮ್ಮ ಕವನಗಳ ಮೂಲಕ ನಾಡಿನ ಜನಮಾನಸದಲ್ಲಿ ಚಿರಸ್ಥಾಯಿಯಾಗಿದ್ದಾರೆ ಎಂದು ಅನ್ನದಾನಿ ಹಿರೇಮಠ ಅಭಿಪ್ರಾಯಪಟ್ಟರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜರುಗಿದ ಎಚ್‌ಎಸ್‌ವ್ಹಿ ನುಡಿ ನಮನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಾಹಿತಿ ಪ್ರೊ. ಚಂದ್ರಶೇಖರ ವಸ್ತ್ರದ ಮಾತನಾಡಿ, ಅವರು ಪ್ರಾಚೀನ ಸಾಹಿತ್ಯವನ್ನು ಅಧ್ಯಯನ ಮಾಡಿ, ಪ್ರಸ್ತುತ ದಿನಮಾನದ ಕವಿಗಳಾದ ಕುವೆಂಪು, ಬೇಂದ್ರೆ, ಪುತಿನ, ನರಸಿಂಹಸ್ವಾಮಿಯಂತಹ ಕವಿಗಳಿಂದ ಪ್ರಭಾವಿತರಾಗಿದ್ದರೂ ತಮ್ಮದೇ ಕಾವ್ಯ ಪಥವನ್ನು ಸೃಷ್ಟಿಸಿ, ಸರಳ ಸಾಲುಗಳ ಮೂಲಕ ಸಹೃದಯರ ಮನದಲ್ಲಿ ಸದಾ ನೆಲೆಸಿದ್ದಾರೆ. ಅವರ ಬರೆಹವನ್ನು ಓದುವ ಮೂಲಕ ಅವರನ್ನು ಅರ್ಥೈಸಿಕೊಳ್ಳುವ ಕಾರ್ಯ ನಡೆಯಬೇಕು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ತಮ್ಮ ಗೀತೆಗಳ ಮೂಲಕ ಸಹೃದಯರ ಭಾವ ಪ್ರಪಂಚವನ್ನು ವಿಸ್ತರಿಸಿದ್ದಾರೆ. ರಂಗಭೂಮಿ ಮತ್ತು ಚಲನಚಿತ್ರ ರಂಗವನ್ನು ಪ್ರವೇಶಿಸಿ ಸಾಹಿತ್ಯಿಕ ರಂಗನ್ನು ನೀಡಿದ್ದಾರೆ. ಮಕ್ಕಳ ಕ್ಷೇತ್ರದ ಬಗ್ಗೆ ವಿಶೇಷ ಆಸಕ್ತಿಯನ್ನು ತಾಳಿ ಶಿಶು ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಎಚ್.ಎಸ್. ವೆಂಕಟೇಶಮೂರ್ತಿ ಅವರ ಕವಿತೆಗಳನ್ನು ಶಿಲ್ಪಾ ಮ್ಯಾಗೇರಿ ಹಾಗೂ ಜಯಶ್ರೀ ಅಂಗಡಿ ವಾಚಿಸಿದರು. ಕಾರ್ಯಕ್ರಮದಲ್ಲಿ ಎಸ್.ಎಂ. ಕಾತರಕಿ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ಸತೀಶ ಚನ್ನಪ್ಪಗೌಡ್ರ, ಅಮರೇಶ ರಾಂಪೂರ, ಬಸವರಾಜ ಗಣಪ್ಪನವರ, ಬಿ.ಎಸ್. ಹಿಂಡಿ, ಜೆ.ಎ. ಪಾಟೀಲ, ತುಷಾರ ಕುರಿ, ಶೇಖರಪ್ಪ ಕಳಸಾಪೂರ, ಬಿ.ಜಿ. ಗಿರಿತಿಮ್ಮಣ್ಣವರ, ಎಂ.ಎಸ್. ಹಾಲಶೆಟ್ಟಿ, ಪಲ್ಲವಿ ಹಿರೇಮಠ, ಜಯದೇವ ಹಿರೇಮಠ, ಕೆ.ಜಿ. ವ್ಯಾಪಾರಿ, ಬಿ.ಎನ್. ಅಂಗಡಿ, ಕಿರಣ ಗುಗ್ಗರಿ ಮೊದಲಾದವರು ಭಾಗವಹಿಸಿದ್ದರು.

**ಗದಗ-ಬೆಟಗೇರಿ ವ್ಯಾಪಾರ,ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ, ಪ್ರಾಧಿಕಾರದ ಅಭಿವೃದ್ಧಿಯ ಪರಿಕಲ್ಪನೆಯ ಅನಾವರಣ ಸಮಾರಂಭ**

# ಪ್ರಾಧಿಕಾರದ ಪರಿಕಲ್ಪನೆ ರಾಜ್ಯಕ್ಕೆ ಮಾದರಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ಹಾಗೂ ಪ್ರಾಧಿಕಾರದ ಅಭಿವೃದ್ಧಿಯ ಪರಿಕಲ್ಪನೆಯ ಅನಾವರಣವು ಒಂದು ಅದ್ಭುತ ಕಾರ್ಯಕ್ರಮವಾಗಿದೆ. ಈ ಯೋಜನೆಯು ಅಭಿವೃದ್ಧಿಗೆ ಪೂರಕವಾದ ಯೋಜನೆಯಾಗಿದೆ ಎಂದು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ ನುಡಿದರು.



ನಗರದ ಪಂಡಿತ ಡಾ. ಭೀಮಸೇನ ಜೋಶಿ ರಂಗಮಂದಿರದಲ್ಲಿ ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ, ಜಿಲ್ಲಾಡಳಿತ ಗದಗ, ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ವತಿಯಿಂದ ಮಂಗಳವಾರ ಜರುಗಿದ ಗದಗ-ಬೆಟಗೇರಿ ವ್ಯಾಪಾರ,ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ ಹಾಗೂ ಪ್ರಾಧಿಕಾರದ ಅಭಿವೃದ್ಧಿಯ ಪರಿಕಲ್ಪನೆಯ ಅನಾವರಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇದೊಂದು ಐತಿಹಾಸಿಕ ಯೋಜನೆಯಾಗಿದೆ. ಈ ಯೋಜನೆ ಪೂರ್ಣಗೊಂಡ ನಂತರ ಇಡೀ ಗದಗ-ಬೆಟಗೇರಿ ನಗರದ ಚಿತ್ರಣವೇ ಬದಲಾಗಲಿದೆ. ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ಈ ಪರಿಕಲ್ಪನೆಯು ಇಡೀ ರಾಜ್ಯಕ್ಕೆ ಮಾದರಿಯಾಗಿದೆ. ಈ ಯೋಜನೆಗೆ ಬೇಕಾಗುವ ಅಗತ್ಯ ಅನುದಾನ ಒದಗಿಸುವದರ ಜೊತೆಗೆ ಎಲ್ಲ ರೀತಿಯ ಸಹಕಾರ ನೀಡಲಾಗುವದು. ಎಚ್.ಕೆ. ಪಾಟೀಲರ ದೂರದೃಷ್ಟಿಯಿಂದಾಗಿ ಗದಗ ಇಂದು ಎಲ್ಲ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಹೊಂದುತ್ತಿದೆ ಎಂದು ಹೇಳಿದರು.

ಕಾನೂನು, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಮಾತನಾಡಿ, ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ ಹಾಗೂ ಪ್ರಾಧಿಕಾರದ ಅಭಿವೃದ್ಧಿಯ ಪರಿಕಲ್ಪನೆಯ ಅನಾವರಣಗೊಳ್ಳುವ 34 ಎಕರೆ 32 ಗುಂಟೆ ಭೂಮಿ ಹೋರಾಟದ ಭೂಮಿಯಾಗಿದೆ ಎಂದರಲ್ಲದೆ, ಇಂತಹ ಸಾರ್ವಜನಿಕರ ಭೂಮಿಯನ್ನು ಉಳಿಸಿದ ಪ್ರಾಮಾಣಿಕ ಅಧಿಕಾರಿ, ಸಾರ್ವಜನಿಕರನ್ನು ಅಭಿನಂದಿಸಿದರು.

> ಈ ಯೋಜನೆಯ 19,33,000 ಚ.ಸೆ.ಮಿ. ಕಟ್ಟಡ ಕಾಮಗಾರಿ ಪ್ರದೇಶವಾಗಿದೆ. ಇಲ್ಲಿ ಉತ್ತಮ ಗುಣಮಟ್ಟದ ಕಟ್ಟಡ ಕಾಮಗಾರಿಗೆ 500 ಕೋಟಿ. ರೂ ಅನುದಾನದನ ಅಗತ್ಯವಿದೆ. ಈ ಯೋಜನೆ ಶೀಘ್ರದಲ್ಲಿಯೇ ಪ್ರಾರಂಭಿಸಿ ಮೂರು ವರ್ಷದೊಳಗಾಗಿ ಪೂರ್ಣಗೊಳಿಸಲು ಪ್ರಯತ್ನಿಸಲಾಗುವದು. ಈ ಯೋಜನೆಯ ಯಶಸ್ವಿಗಾಗಿ ಎಲ್ಲರ ಸಹಕಾರ ಅಗತ್ಯವಾಗಿದ್ದು, ಸ್ಥಳೀಯರು ಇದರ ಹೆಚ್ಚಿನ ಸದುಪಯೋಗ ಪಡೆದುಕೊಳ್ಳಬೇಕು.
>
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ್ ಬಬರ್ಚಿ, ಪಂಚ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ನಗರಸಭೆ ಸದಸ್ಯರುಗಳು, ಮಾಜಿ ಶಾಸಕ ಡಿ.ಆರ್. ಪಾಟೀಲ, ರಾಮಣ್ಣ ಲಮಾಣಿ, ಮಾಜಿ ಸಂಸದರಾದ ಐ.ಜಿ. ಸನದಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿ.ಪಂ ಸಿಇಓ ಭರತ ಎಸ್ ಮುಂತಾದವರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸ್ವಾಗತಿಸಿದರು. ವೆಂಕಟೇಶ ಅಲ್ಕೋಡ ಹಾಗೂ ತಂಡದವರು ನಾಡಗೀತೆ ಪ್ರಸ್ತುತಪಡಿಸಿದರು. ಇದೇ ಸಂದರ್ಭದಲ್ಲಿ 'ವರ್ಷ ಎರಡು ಹರ್ಷ ನೂರು' ಕಿರುಹೊತ್ತಿಗೆಯನ್ನು ಬಿಡುಗಡೆಗೊಳಿಸಲಾಯಿತು.

> ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಗದಗ-ಬೆಟಗೇರಿ ನಗರದ ಮಧ್ಯಭಾಗದಲ್ಲಿ ಹೊಸ ವಿಚಾರಗಳು, ಹೊಸ ಕಟ್ಟಡಗಳು ನಿರ್ಮಾಣವಾಗಬೇಕು ಎನ್ನುವದು ಎಲ್ಲರ ಕನಸಾಗಿತ್ತು. ಆ ಕನಸು ನನಸಾಗುವ ಕಾಲ ಕೂಡಿ ಬಂದಿದ್ದು, ಗದಗ ಜನ ಇದರ ಸದುಪಯೋಗ ಪಡೆದುಕೊಳ್ಳಬೇಕು. ವ್ಯಾಪಾರಸ್ಥರು ಬೇರೆ ನಗರಗಳಲ್ಲಿ ಹೂಡಿಕೆ ಮಾಡುವದಕ್ಕೂ ಮುಂಚೆ ಜಿಲ್ಲೆಯಲ್ಲಿ ಹೂಡಿಕೆ ಮಾಡಬೇಕು ಎಂದು ಹೇಳಿದರು.

**ಕರ್ನಾಟಕ ವಿಶ್ವವಿದ್ಯಾಲಯಕ್ಕೆ ಚೆಲ್ಲಾಟ : ಪದವಿ ವಿದ್ಯಾರ್ಥಿಗಳಿಗೆ ಪ್ರಾಣಸಂಕಟ**

# ಬಡ ವಿದ್ಯಾರ್ಥಿಗಳಿಗೆ ಕಂಟಕವಾಯ್ತೇ ಅಧಿಸೂಚನೆ?

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಾವಿರಾರು ಪದವಿ ವಿದ್ಯಾರ್ಥಿಗಳ ಭವಿಷ್ಯದಲ್ಲಿ ಕರ್ನಾಟಕ ವಿಶ್ವವಿದ್ಯಾಲಯ ಹಣದ ಚೆಲ್ಲಾಟ ಆಡುತ್ತಿದ್ದರೆ, ಬಡ ವಿದ್ಯಾರ್ಥಿಗಳ ಗೋಳಾಟ, ಪಾಲಕರ ನರಳಾಟ ಹೆಚ್ಚಾಗಿದೆ. ಇದರಿಂದ ಪದವಿ ಪಡೆಯಬೇಕೆಂಬ ಆಸೆಯನ್ನು ಹೊತ್ತಿರುವ, ಹೆಚ್ಚಿನ ವಿದ್ಯಾಭ್ಯಾಸದ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳಿಗೆ ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ ಅಧಿಸೂಚನೆ ಕಂಟಕವಾಗಿ ಪರಿಣಮಿಸಿದೆ.



ಧಾರವಾಡದ ಕರ್ನಾಟಕ ವಿಶ್ವವಿದ್ಯಾಯಲ ನಿರ್ಲಕ್ಷ್ಯದಿಂದ ಪದವಿ ವಿದ್ಯಾರ್ಥಿಗಳು ಮಾರ್ಚ್ ತಿಂಗಳಲ್ಲಿ ಮರು ಮೌಲ್ಯಮಾಪನಕ್ಕೆ ಒಂದು ವಿಷಯಕ್ಕೆ 650 ರೂಗಳಂತೆ ಭರಣ ಮಾಡಿದ್ದಾರೆ. ಇದಕ್ಕೆ ಪ್ರತಿಯಾಗಿ 6 ಮತ್ತು 5ನೇ ಸೆಮಿಸ್ಟರ್ ಫಲಿತಾಂಶವನ್ನು ಬಿಡುಗಡೆ ಮಾಡಲಾಗಿದೆ. ಆದರೆ, 2 ಮತ್ತು 4ನೇ ಸೆಮಿಸ್ಟರ್ ಫಲಿತಾಂಶವನ್ನು ತಡೆಹಿಡಿದ್ದಾರೆ. 1,3,5 ಹಾಗೂ 6ನೇ ಸೆಮಿಸ್ಟರ್‌ಗಳಲ್ಲಿ ಉತ್ತೀರ್ಣಗೊಂಡ ವಿದ್ಯಾರ್ಥಿಗಳು ತಮ್ಮ 2 ಹಾಗೂ 4ನೇ ಸೆಮಿಸ್ಟರ್ ಫಲಿತಾಂಶಕ್ಕಾಗಿ ಕಾದು ಕುಳಿತುಕೊಂಡಿದ್ದರು. ಆದರೆ, ಫಲಿತಾಂಶದ ನಿರೀಕ್ಷೆಯಲ್ಲಿದ್ದ ವಿದ್ಯಾರ್ಥಿಗಳಿಗೆ ಆಘಾತ ಸೃಷ್ಠಿಸುವ ಅಧಿಸೂಚನೆಯನ್ನು ಕೆಯುಡಿ ಹೊರಡಿಸಿದ್ದು, ವಿದ್ಯಾರ್ಥಿಗಳಿಗೆ ಹಾಗೂ ಪಾಲಕರಿಗೆ ತಲೆನೋವಾಗಿದೆ.

ಸದ್ಯ ಹೊರಡಿಸಿರುವ ಅಧಿಸೂಚನೆಯನ್ನು ಈ ಹಿಂದೆ ಕೂಡ ಕರ್ನಾಟಕ ವಿಶ್ವವಿದ್ಯಾಲಯ ಹೊರಡಿಸಿತ್ತು. ವಿದ್ಯಾರ್ಥಿಗಳಿಂದ ಹಣ ತುಂಬಿಸಿಕೊಂಡು ಉತ್ತೀರ್ಣಗೊಂಡರೆ ನೀವು ಪಾವತಿಸಿದ ಮೊತ್ತವನ್ನು ಮರಳಿ ನೀಡುತ್ತೇವೆ ಎಂದು ಹಣ ವಸೂಲಿ ಮಾಡಿದ್ದರು. ಆದರೆ, 6 ಮತ್ತು 5ನೇ ಸೆಮಿಸ್ಟರ್‌ಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಇದುವರೆಗೂ ಹಣ ಮಾತ್ರ ಮರಳಿ ಬಂದಿಲ್ಲ.

ಮರು ಮೌಲ್ಯಮಾಪನ ಫಲಿತಾಂಶಕ್ಕೆ ಯುಯುಸಿಎಂಎಸ್ ಆಧುನಿಕ ತಂತ್ರಜ್ಞಾನ ವಿದ್ಯಾರ್ಥಿಗಳ ಜೀವನದಲ್ಲಿ ಮಾರಕವಾಗುತ್ತಿದೆ. ಏಕೆಂದರೆ, ಈಗಾಗಲೇ ಫಲಿತಾಂಶ ಬಿಡುಗಡೆಯಾಗಿ ವಿದ್ಯಾರ್ಥಿಗಳಿಗೆ ತಾಂತ್ರಿಕ ಸಮಸ್ಯೆ ತಣ್ಣೀರು ಎರಚಿದಂತಾಗಿದೆ.

ಕರ್ನಾಟಕ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ಬರುವ ಪದವಿ ಕಾಲೇಜುಗಳಲ್ಲಿ ಹೆಚ್ಚಾಗಿ ಬಡವರು, ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶಿಕ್ಷಣ ಪಡೆಯುವುದು ಸಾಮಾನ್ಯವಾಗಿದೆ. ಆಕಸ್ಮಿಕ ಒಂದು ಅಥವಾ ಎರಡು ವಿಷಯಗಳಲ್ಲಿ ಅನುತ್ತೀರ್ಣಗೊಂಡರೆ ಒಂದು ವಿಷಯಕ್ಕೆ 650 ರೂಗಳನ್ನು ಭರಣ ಮಾಡಬೇಕು. ವಿದ್ಯಾರ್ಥಿಗಳು ಕಾಲೇಜು ಶುಲ್ಕ ಮತ್ತು ಪರೀಕ್ಷೆ ಶುಲ್ಕಗಳನ್ನು ಸಹಜವಾಗಿ ಪಾಲಕರಿಂದ ಪಡೆದುಕೊಳ್ಳಬೇಕು. ಇಂತಹ ಸ್ಥಿತಿಯಲ್ಲಿ ಕರ್ನಾಟಕ ವಿಶ್ವವಿದ್ಯಾಲಯ ಹಣದ ಆಸೆಗಾಗಿ ವಿದ್ಯಾರ್ಥಿಗಳ ಜೀವನದಲ್ಲಿ ಆಟ ಆಡುತ್ತಿದೆಯೇ ಎಂಬುದು ಪಾಲಕರನ್ನು ಕಾಡುತ್ತಿರುವ ಪ್ರಶ್ನೆಯಾಗಿದೆ.

> ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದಲ್ಲಿ ಸನ್-1949ರಲ್ಲಿ ಮಾಡಿದ ಕಾನೂನು ಈಗಲೂ ಮುಂದುವರೆದಿದ್ದು, ಇದರಲ್ಲಿ ವಿದ್ಯಾರ್ಥಿಗಳಿಗೆ ಗ್ರೇಸ್ ಮಾರ್ಕ್ಸ್ ಮಾಡುವ ಪದ್ಧತಿ ಇತ್ತು. ಸದ್ಯ ಯುಯುಸಿಎಂಎಸ್ ತಂತ್ರಜ್ಞಾನದ ಅಳವಡಿಕೆಯಿಂದ ಫಲಿತಾಂಶ ಬಿಡುಗಡೆ ಮಾಡಲು ವಿಳಂಬವಾಗಿದೆ. ಕುಲಪತಿ ಹಾಗೂ ನಿರ್ದೇಶಕರಿಗೆ ಸಭೆಯನ್ನು ಆಯೋಜಿಸಿ ತಡೆ ಹಿಡಿದಿರುವ ಸೆಮಿಸ್ಟರ್‌ನ ಫಲಿತಾಂಶವನ್ನು ಬಿಡುಗಡೆ ಮಾಡಲು ಸೂಚನೆ ನೀಡುತ್ತೇವೆ, ಎರಡು ಅಥವಾ ಮೂರು ದಿನಗಳಲ್ಲಿ ಫಲಿತಾಂಶ ಹೊರ ಬೀಳುತ್ತದೆ ಎಂದು ಉನ್ನತ ಶಿಕ್ಷಣ ಸಚಿವಾಲಯಕ್ಕೆ ಕೆಯುಡಿಯ ನಿರ್ದೇಶಕರು ಮಾಹಿತಿ ನೀಡಿದ್ದಾರೆ.
>
> **– ಡಾ. ಭಾಗ್ಯವಾನ ಎಸ್. ಮುದಿಗೌಡ್ರ.**
> ಉನ್ನತ ಶಿಕ್ಷಣ ಸಚಿವಾಲಯದ ವಿಶೇಷಾಧಿಕಾರಿ.

# ನರೇಗಾ ಬಾಕಿ ವೇತನ ಪಾವತಿಸಲು ಮನವಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ನರೇಗಾ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಳೆದ ಐದು ತಿಂಗಳ ವೇತನ ಬಾಕಿಯಿದ್ದು, ಇದನ್ನು ತಕ್ಷಣವೇ ಪಾವತಿಸಬೇಕು ಮತ್ತು ಸೇವಾ ಭದ್ರತೆ ಒದಗಿಸಬೇಕೆಂದು ನರೇಗಾ ನೌಕರ ಸಂಘದ ಜಿಲ್ಲಾ ಅಧ್ಯಕ್ಷ ಸುರೇಶ ಬಾಳಿಕಾಯಿ ಅವರು ಲಕ್ಕುಂಡಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ತಮ್ಮದೇ ಸರ್ಕಾರ ಜಾರಿಗೆ ತಂದಿರುವ ನರೇಗಾ ಯೋಜನೆಯ ಸಿಬ್ಬಂದಿಗಳಿಗೆ ಸೇವಾ ಭದ್ರತೆ ಒದಗಿಸಿ, ಬಾಕಿ ವೇತನವನ್ನು ಶೀಘ್ರವಾಗಿ ಪಾವತಿಸಲು ಕ್ರಮ ಕೈಗೊಳ್ಳಬೇಕೆಂದು ವಿನಂತಿಸಿದರು. ಮನವಿ ಪತ್ರವನ್ನು ಸ್ವೀಕರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಷಯವನ್ನು ಪರಿಶೀಲಿಸುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ನರೇಗಾ ನೌಕರ ಸಂಘದ ಗೌರವಾಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ್ ಸೇರಿದಂತೆ ಪದಾಧಿಕಾರಿಗಳಿದ್ದರು.

# ಶೈಕ್ಷಣಿಕ ವರ್ಷದ ಸಮಾರೋಪ ಸಮಾರಂಭ

■ **ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ನವನಗರ ಹುಬ್ಬಳ್ಳಿ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಕಾನೂನು ಮಹಾವಿದ್ಯಾಲಯ ಗದಗದಲ್ಲಿ 2024-25ನೇ ಸಾಲಿನ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಕಾರ್ಯಕ್ರಮ, ಶೈಕ್ಷಣಿಕ ವರ್ಷದ ಸಮಾರೋಪ ಸಮಾರಂಭ ನೆರವೇರಿತು.



ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಹಾವಿದ್ಯಾಲಯದ ಅಧ್ಯಕ್ಷ ಎಸ್.ಕೆ. ಪಾಟೀಲ ವಕೀಲರು, ವಿದ್ಯಾರ್ಥಿಗಳಿಗೆ ಜೀವನದಲ್ಲಿ ಶಿಸ್ತು, ಸಮಯಪ್ರಜ್ಞೆ ತುಂಬಾ ಮುಖ್ಯವಾಗಿದೆ. ಅವರ ಮುಂದಿನ ಜೀವನದಲ್ಲಿ ಅತ್ಯುತ್ತಮ ವಕೀಲರಾಗಿ ಸಮಾಜಕ್ಕೆ ಸೇವೆಯನ್ನು ಸಲ್ಲಿಸಿ ಎಂದು ಶುಭ ಹಾರೈಸಿದರು.

ಶೈಕ್ಷಣಿಕ ವರ್ಷದಲ್ಲಿ ನಡೆಸಿದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಪ್ರಶಸ್ತಿ ಮತ್ತು ಪ್ರಮಾಣಪತ್ರಗಳನ್ನು ನೀಡಲಾಯಿತು. ಮಹಾವಿದ್ಯಾಲಯದ ಪ್ರಾಚಾರ್ಯರಾದ ಪಲ್ಲವಿ ಬುಯ್ಯ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಉಪನ್ಯಾಸಕಾದ ಎಸ್.ಐ. ಅಣ್ಣಿಗೇರಿ, ಎಮ್.ವ್ಹಿ. ಹಿರೇಮಠ, ಎಮ್.ಎ. ಕೊರಡಕೇರಿ, ವಿ.ಎಸ್. ಹಿರೇಮಠ, ಡಿ.ಎಲ್. ಕುಲಕರ್ಣಿ, ಎನ್.ಎಲ್. ರಾಠೋಡ, ಎಮ್.ಎಮ್. ಮಡ್ಡಿ ಹಾಗೂ ಉಪನ್ಯಾಸಕಿ ಎಸ್.ಎಸ್. ಪಾಟೀಲ, ಎ.ಆರ್. ಕುರಿ, ಬಿ.ಪಿ. ಹೊತನ್ನಾಳಮಠ, ಸಾಂಸ್ಕೃತಿಕ ವಿಭಾಗದ ಸಂಯೋಜಕರಾದ ಎನ್.ಎನ್. ಮುಲ್ಲಾ ಉಪಸ್ಥಿತರಿದ್ದರು.

ಶಫೀನ ರೋಣದ, ಮುಕುಲ್ ಕುಲಕರ್ಣಿ, ರಮೇಶ ಗುರಿಕಾರ, ಪರಶುರಾಮ ಕೆ ಮತ್ತು ಕೆ. ಪ್ರೇಮಲೀಖಾ ಜಿ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ಪ್ರವೇಶ ಪಡೆಯಲು ಇಂದು ಕೌನ್ಸಿಲಿಂಗ್

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಹೆಣ್ಣು ಮಕ್ಕಳ ವಸತಿ ಶಾಲೆಯಲ್ಲಿ 2025-26ನೇ ಸಾಲಿಗೆ 6ನೇ ತರಗತಿ ಪ್ರವೇಶ ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಕೌನ್ಸಿಲಿಂಗಾಗಿ ಜೂನ್ 4ರಂದು ವಿಶೇಷ ವರ್ಗದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮುಂಜಾನೆ 10 ಗಂಟೆಗೆ, ಅಲ್ಪಸಂಖ್ಯಾತರ ಸಮುದಾಯದ ವರ್ಗದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮುಂಜಾನೆ 11 ಗಂಟೆಗೆ ಮತ್ತು ಇತರೆ ವರ್ಗದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮಧ್ಯಾಹ್ನ 2 ಗಂಟೆಗೆ ಸಮಯ ನಿಗದಿ ಪಡಿಸಲಾಗಿದೆ.

**ಕೌನ್ಸಿಲಿಂಗ್ ನಡೆಯುವ ಸ್ಥಳ:** ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಜಿಲ್ಲಾ ಆಸ್ಪತ್ರೆ ಹಿಂದುಗಡೆ, ಮಲ್ಲಸಮುದ್ರ.

ಅಗತ್ಯ ದಾಖಲೆಗಳು: ಪರೀಕ್ಷೆಯ ಪ್ರವೇಶ ಪತ್ರ, 5ನೇ ತರಗತಿ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಮೀಸಲಾತಿ ಕೋರಿದ ಪ್ರಮಾಣ ಪತ್ರ.

ಜೂನ್ 4ರಂದು ತಿಳಿಸಿದ ಸಮಯಕ್ಕೆ ಸರಿಯಾಗಿ ಎಲ್ಲಾ ದಾಖಲೆಗಳೊಂದಿಗೆ ಮತ್ತು ವಿದ್ಯಾರ್ಥಿಗಳ ಸಮೇತ ಕೌನ್ಸಿಲಿಂಗ್‌ಗೆ ಹಾಜರಾಗಬೇಕೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಜಿಎನ್‌ಟಿಟಿಎಫ್ ಸಂಸ್ಥೆ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ**

# ಯುವಜನರ ಕೌಶಲ್ಯ ಅಭಿವೃದ್ಧಿಯಾಗಲಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಎನ್‌ಟಿಟಿಎಫ್ ಸಂಸ್ಥೆ ಮೂಲಕ ಯುವಜನತೆಯ ಕೌಶಲ್ಯ ಅಭಿವೃದ್ಧಿಪಡಿಸುವ ತರಬೇತಿ ನೀಡಿ ಉದ್ಯೋಗವನ್ನು ಪಡೆಯುವಂತ ಕಾರ್ಯವಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ನಗರದ ಗದಗ ಕೋ-ಆಪರೇಟೀವ್ ಇಂಡಸ್ಟ್ರಿಯಲ್ ಎಸ್ಟೇಟ್ ಆವರಣದಲ್ಲಿ ಮಂಗಳವಾರ ಜಿಎನ್‌ಟಿಟಿಎಫ್ ಸಂಸ್ಥೆಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಜಿಎನ್‌ಟಿಟಿಎಫ್ ಎಂಬ ಪ್ರತಿಷ್ಠಿತ ಸಂಸ್ಥೆಯನ್ನು ಗದಗ ನಗರದಲ್ಲಿ ಪ್ರಾರಂಭಿಸಿದ್ದು ಸಂತೋಷದ ವಿಷಯವಾಗಿದೆ. ಈಗಾಗಲೇ ಈ ಸಂಸ್ಥೆ ರಾಜ್ಯದ 16 ಕಡೆ ಕಾರ್ಯನಿರ್ವಸುತ್ತಿದ್ದು, ಹಲವಾರು ತರಬೇತಿಗಳ ಮೂಲಕ ಯುವಜನತೆಯ ಕೆಲಸಕ್ಕೆ ಬೇಕಾದ ಕೌಶಲ್ಯವನ್ನು ತರಬೇತಿ ಮೂಲಕ ನೀಡುತ್ತಿದೆ. ಯುವ ಜನರಿಗೆ ಕೌಶಲ್ಯ ಅಭಿವೃದ್ಧಿ ಆಗಬೇಕು. ಇಲ್ಲದಿದ್ದರೆ ಉದ್ಯೋಗ ದೊರಕಿಸಿಕೊಳ್ಳುವುದು ಕಷ್ಟ. ಈಗಿನ ಮಾರುಕಟ್ಟಯಲ್ಲಿರುವ ಉದ್ಯೋಗಕ್ಕೆ ಬೇಕಾದ ಕೌಶಲ್ಯವನ್ನು ದಿನದಿಂದ ದಿನಕ್ಕೆ ಅಭಿವೃದ್ಧಿಪಡಿಸಿಕೊಳ್ಳಬೇಕು. ಕೌಶಲ್ಯ ಇಲ್ಲದೆ ಹೋದರೆ ಯುವಕರಿಗೆ ಕೆಲಸ ಸಿಗುವುದಿಲ್ಲ ಎಂದು ನುಡಿದರು.

ಈ ಸಂದರ್ಭದಲ್ಲಿ ಕಾನೂನು, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಪೌರಾಡಳಿತ ಮತ್ತ ಹಜ್ ಸಚಿವ ರಹೀಂ ಖಾನ್, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ನರಗುಂದ ವಿಧಾನಸಭೆ ಶಾಸಕ ಸಿ.ಸಿ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿ.ಎನ್.ಟಿಟಿಎಫ್ ಚೇರಮನ್ ಕೃಷ್ಣಗೌಡ ಪಾಟೀಲ ಸೇರಿದಂತೆ ಗಣ್ಯರು ಹಾಜರಿದ್ದರು.

> ನಮ್ಮ ಸರ್ಕಾರ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಮೂಲಕ ನಿರುದ್ಯೋಗಿ ಪದವೀಧರಿಗೆ 3000 ರೂ, ಡಿಪ್ಲೊಮಾ ಕಲಿತವರಿಗೆ 1500 ರೂನಂತೆ 2 ವರ್ಷಗಳ ಕಾಲ ಪ್ರತಿ ತಿಂಗಳು ನಿರುದ್ಯೋಗ ಭತ್ಯೆಯನ್ನು ನೀಡುಲಾಗುತ್ತಿದೆ. ಈ 2 ವರ್ಷದಲ್ಲಿ ಯುವಜನತೆ ತಮಗೆ ಆಸಕ್ತಿಯಿರುವ ಯಾವುದಾದರು ಒಂದು ಕೌಶಲ್ಯವನ್ನು ಅಭಿವೃದ್ಧಿಪಡೆಸಿಕೊಳ್ಳಲು ಕೌಶ್ಯಭಿವೃದ್ಧಿ ಇಲಾಖೆಯಿಂದ ತರಬೇತಿ ನೀಡಬೇಕೆಂದು ಕೌಶಲ್ಯ ಅಭಿವೃದ್ಧಿ ಸಚಿವ ಶರಣಪ್ರಕಾಶ ಪಾಟೀಲ ಅವರಿಗೆ ಸೂಚಿಸಲಾಗಿದೆ. ಅದರಂತೆ ಅವರು ಕೌಶಲ್ಯ ಅಭಿವೃದ್ಧಿಪಡಿಸುವ ತರಬೇತಿ ಕೈಗೊಳ್ಳುತ್ತಿದ್ದು, ಉದ್ಯೋಗ ಮೇಳವನ್ನು ಏರ್ಪಡಿಸಿ ಉದ್ಯಮಿ ಮತ್ತು ಉದ್ಯೋಗ ಆಕಾಂಕ್ಷಿಗಳ ವೇದಿಕೆಯನ್ನು ಸೃಷ್ಟಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.


ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ ಗದಗ
ತಾಲೂಕ ಪಂಚಾಯತ ಗದಗ

**ಗ್ರಾಮ ಪಂಚಾಯತ ಕಾರ್ಯಾಲಯ, ಬಿಂಕದಕಟ್ಟಿ**

ತಾಲೂಕ :- ಗದಗ ಜಿಲ್ಲಾ:- ಗದಗ
ಕ್ರ.ಸಂ:ಗ್ರಾ.ಪಂ.ಬಿ/ಕಲಿಕಾ/ದ.ಪ.ಪ್ರ/2025-26 ದಿನಾಂಕ:02-06-2025

**ಟೆಂಡರ ಪ್ರಕಟಣೆ**

2023-24 ನೇ ಸಾಲಿನ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನದಡಿಯಲ್ಲಿ ಗ್ರಾಮ ಪಂಚಾಯತ ಕಲಿಕಾ ಕೇಂದ್ರವನ್ನು ಅಭಿವೃದ್ಧಿ ಪಡಿಸುವ ಯೋಜನೆಯಡಿಯಲ್ಲಿ ಅನುಷ್ಠಾನಗೊಳ್ಳುವ ಈ ಕೆಳಕಂಡ ಕಾಮಗಾರಿಗೆ ವಿವಿದ ರೀತಿಯ ಸಾಮಗ್ರಿಗಳನ್ನು ಪೂರೈಸುವ ಸಂಬಂಧ ಅಲ್ಪಾವಧಿ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತ ಸರಬರಾಜುದಾರರು/ಪೂರೈಕೆದಾರರು ಟೆಂಡರ ಸಲ್ಲಿಸಬಹುದಾಗಿದ್ದು ವಿವರ ಮತ್ತು ವೇಳಾಪಟ್ಟಿ ಈ ಕೆಳಗಿನಂತಿದೆ.

| ಕ್ರ.ಸಂ. | ಕಾಮಗಾರಿ ಹೆಸರು | ಕಾಮಗಾರಿಗಳಿಗೆ ಪೂರೈಸಬೇಕಾದ ಸಾಮಗ್ರಿ ಮೊತ್ತ |
|---|---|---|
| 1 | ಕಲಿಕಾ ಕೇಂದ್ರಕ್ಕೆ , ವಾಲ್ ಡ್ರಾಫ್ , ಸಭಾಂಗಣಕ್ಕೆ Meeting tables & Officer Tables | 495000 |

1) ಟೆಂಡರ ಅವದಿ 04-06-2025 ರಿಂದ 11-06-2025 ರವರೆಗೆ
2) ಭರ್ತಿ ಮಾಡಿದ ಅರ್ಜಿಗಳನ್ನು ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸುವ ಕೊನೆಯ ದಿನಾಂಕ 11-06-2025 ಸಾಯಂಕಾಲ 5:00 ಘಂಟೆಯವರೆಗೆ.
3) ಟೆಂಡರ ತೆರೆಯುವ ದಿನಾಂಕ 12-06-2025 ಬೆಳಗ್ಗೆ 11:00 ಘಂಟೆಗೆ.
4) ಅರ್ಜಿ ಸಲ್ಲಿಸುವ ಆಸಕ್ತ ಪೂರೈಕೆದಾರರು ಪ್ರತ್ಯೇಕವಾಗಿ ಟೆಂಡರಗಳನ್ನು ಸಲ್ಲಿಸತಕ್ಕದ್ದು.
5) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳ ಹೆಚ್ಚಿನ ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಾರ್ಯಲಯ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.
6) ಟೆಂಡರ ಅರ್ಜಿ ಪಾರಂ ಶುಲ್ಕ 500 ಹಾಗೂ ಟೆಂಡರ ಇತರೇ ದಾಖಲಾತಿ ಹಾಗೂ ಸಾಮಗ್ರಿ ಪೂರೈಕೆಗೆ ಸಂಬಂಧಿಸಿದ ವಿವರಗಳನ್ನು ಗ್ರಾಮ ಪಂಚಾಯತಿಯಲ್ಲಿ ಪಡೆಯುವುದು.
7) ಸದರಿ ಟೆಂಡರನ್ನು ಯಾವುದೇ ಸ್ಥಿತಿಯಲ್ಲಿ ರದ್ದು ಪಡಿಸುವ ಮತ್ತು ಬದಲಾವಣೆ ಮಾಡುವ ಅದಿಕಾರವನ್ನುಗ್ರಾಮ ಪಂಚಾಯತಿಗೆ ಕಾಯ್ದಿರಿಸಲಾಗಿದೆ.
8) ಟೆಂಡರಗೆ ನಿಗದಿಪಡಿಸಿದ ಇ.ಎಮ್.ಡಿ. ಮೊತ್ತ 12375=00 ಅಧ್ಯಕ್ಷರು/ಪಿ.ಡಿ.ಓ ಗ್ರಾಮ ಪಂಚಾಯತ ಬಿಂಕದಕಟ್ಟಿ ಇವರ ಹೆಸರಿನಲ್ಲಿ ಸಲ್ಲಿಸುವುದು.

ಸಹಿ ಆಗಿದೆ/-
**ಪಂಚಾಯತ ಅಭಿವೃದ್ಧಿ ಅಧಿಕಾರಿ,**
**ಗ್ರಾಮ ಪಂಚಾಯತ, ಬಿಂಕದಕಟ್ಟಿ**

ಸಹಿ ಆಗಿದೆ/-
**ಅಧ್ಯಕ್ಷರು,**
**ಗ್ರಾಮ ಪಂಚಾಯತ, ಬಿಂಕದಕಟ್ಟಿ**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka